ಮಳೆ ನೀರು ವ್ಯರ್ಥವಾಗದಂತೆ ಮಳೆ ನೀರು ಕೊಯ್ಲಿಗೆ ಕ್ರಮ ವಹಿಸಬೇಕು. ಬೋರ್‌ವೆಲ್‌ಗಳು ಬತ್ತದಂತೆ ನೋಡಿಕೊಳ್ಳಬೇಕು. ಕೃಷಿ ಹೊಂಡಗಳ ನಿರ್ಮಾಣಕ್ಕೆ ಆದ್ಯತೆ ನೀಡಬೇಕು. ಕೆರೆ ನಾಲೆಗಳನ್ನು ಶುಚಿಗೊಳಿಸಬೇಕು. ಈ ಮೂಲಕ ಕುಡಿಯುವ ನೀರಿನ ಸಮಸ್ಯೆ ನಿವಾರಿಸಲು ಅಗತ್ಯ ಕ್ರಮ ವಹಿಸಬೇಕು.
• **ಡಾ. ಮಂಜುನಾಥ್**, ಸಂಸದರು

ಜಿಲ್ಲೆಯ ಕೆರೆಗಳಿಗೆ ನೀರು ತುಂಬಿಸಿ

ಸಂಸದ ಡಾ. ಮಂಜುನಾಥ್ ಅಧಿಕಾರಿಗಳಿಗೆ ಸಲಹೆ | ಜಿಲ್ಲಾ ಮಟ್ಟದ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿ ಸಭೆ

• **ಕನ್ನಡಪ್ರಭ ವಾರ್ತೆ** ರಾಮನಗರ

ಜಿಲ್ಲೆಯ ಕೆರೆಗಳಿಗೆ ನೀರು ತುಂಬಿಸುವುದರಿಂದ ಅಂತರ್ಜಲ ಹೆಚ್ಚಾಗಿ ಬೋರ್‌ವೆಲ್‌ಗಳಿಗೆ ನೀರು ಲಭಿಸಲಿದೆ, ಆ ಮೂಲಕ ಕುಡಿಯುವ ನೀರಿನ ಸಮಸ್ಯೆ ನೀಗಿಸಬಹುದಾಗಿದೆ. ಆದ್ದರಿಂದ ಕೆರೆ ತುಂಬಿಸುವ ಯೋಜನೆ ಕಾರ್ಯಗತಗೊಳಿಸಬೇಕು ಎಂದು ಸಂಸದ ಡಾ. ಸಿ.ಎನ್.ಮಂಜುನಾಥ್ ಅಧಿಕಾರಿಗಳಿಗೆ ಸಲಹೆ ನೀಡಿದರು.

ನಗರದ ಜಿಪಂ ಸಭಾಂಗಣದಲ್ಲಿ ಕೇಂದ್ರ ಪುರಸ್ಕೃತ ಯೋಜನೆಗಳ ಜಿಲ್ಲಾ ಮಟ್ಟದ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿ (ದಿಶಾ) ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಲ್ ಜೀವನ್ ಮಿಷನ್ (ಜೆಜೆಎಂ) ಯೋಜನೆಯಡಿ ಜಿಲ್ಲೆಯಲ್ಲಿ ಕೈಗೊಂಡಿರುವ ಕಾಮಗಾರಿಗಳನ್ನು ತ್ವರಿತ ಗತಿಯಲ್ಲಿ ಪೂರ್ಣಗೊಳ್ಳಲು ಸಂಬಂಧಪಟ್ಟ ಗುತ್ತಿಗೆದಾರರಿಗೆ ಸೂಚಿಸಲಾಗಿದೆ. ಕಾಮಗಾರಿಗಳನ್ನು ಪೂರ್ಣಗೊಳಿಸದ ಗುತ್ತಿಗೆದಾರರಿಗೆ ಇದುವರೆಗೂ 65 ಲಕ್ಷ ರು. ದಂಡ ವಿಧಿಸಲಾಗಿದೆ ಎಂದು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಕಾರ್ಯಪಾಲಕ ಅಭಿಯಂತರರು ಸಭೆಗೆ ಮಾಹಿತಿ ನೀಡಿದ್ದಾರೆ. ಜೆಜೆಎಂ ಕಾಮಗಾರಿಗಳನ್ನು ಶೀಘ್ರ ಪೂರ್ಣಗೊಳಿಸಲು ಕ್ರಮ ಕೈಗೊಳ್ಳುವಂತೆ ಸಂಸದರು ಕಟ್ಟುನಿಟ್ಟಿನ ಸೂಚನೆ ನೀಡಿದರು.

ನರೇಗಾ ಯೋಜನೆಯಡಿ ಕೆಲವೆಡೆ ಇಂಗುಗುಂಡಿಗಳನ್ನು ತೋಡಲಾಗುತ್ತದೆ. ನಂತರದ ಕೆಲವೇ ದಿನಗಳಲ್ಲಿ ಅವುಗಳನ್ನು ಮುಚ್ಚಲಾಗುತ್ತಿದೆ. ಭೂಮಿಗೆ ನೀರು ಬಸಿದು ಅಂತರ್ಜಲ ಹೆಚ್ಚಳವಾಗುವಲ್ಲಿ ಇಂಗುಗುಂಡಿಗಳು ಹಾಗೂ ಚೆಕ್ ಡ್ಯಾಂಗಳ ಪಾತ್ರ ಮಹತ್ವದ್ದಾಗಿದೆ. ಇಂತಹ ಕಾರ್ಯಗಳಲ್ಲಿ ಸರ್ಕಾರದ ಜವಾಬ್ದಾರಿಯೊಂದಿಗೆ ಸಾರ್ವಜನಿಕರ ಜವಾಬ್ದಾರಿಯೂ ಮುಖ್ಯ. ನೀರನ್ನು ಭೂಮಿಗೆ ಇಂಗಿಸುವ ಕ್ರಮಗಳ ಬಗ್ಗೆ ಸಾರ್ವಜನಿಕರಲ್ಲಿ ವ್ಯಾಪಕ ಅರಿವು ಮೂಡಿಸುವಂತೆ ಅಧಿಕಾರಿಗಳಿಗೆ ತಿಳಿಸಿದರು.



ರಾಮನಗರದಲ್ಲಿ ಸಂಸದ ಡಾ.ಮಂಜುನಾಥ್ ಅಧ್ಯಕ್ಷತೆಯಲ್ಲಿ ಕೇಂದ್ರ ಪುರಸ್ಕೃತ ಯೋಜನೆಗಳ ಜಿಲ್ಲಾ ಮಟ್ಟದ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿ ಸಭೆ ನಡೆಯಿತು.

ಜಿಲ್ಲೆಯ ಕೆರೆಗಳು ಒತ್ತುವರಿಯಾಗಿರುವ ಬಗ್ಗೆ ದಿಶಾ ಸಮಿತಿ ಸದಸ್ಯರು ಪ್ರಸ್ತಾಪಿಸಿದಾಗ ಪ್ರತಿಕ್ರಿಯಿಸಿದ ಜಿಲ್ಲಾಧಿಕಾರಿಯವರು ಜಿಲ್ಲೆಯಲ್ಲಿ ಒತ್ತುವರಿಯಾಗಿರುವ ಎಲ್ಲಾ ಕೆರೆಗಳ ಜಾಗ ಸರ್ವೆ ನಡೆಸಲಾಗುತ್ತಿದ್ದು ಒಟ್ಟು 1,700 ಎಕರೆ ಕೆರೆ ಭೂಮಿ ಒತ್ತುವರಿಯಾಗಿದೆ, ಮುಂದಿನ ದಿನಗಳಲ್ಲಿ ಒತ್ತುವರಿ ತೆರವು ಕಾರ್ಯ ಕೈಗೊಳ್ಳಲಾಗುವುದು ಎಂದರು.

ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಮಂಜುನಾಥ್ ಮಾತನಾಡಿ, ದೇಶದಲ್ಲೇ ಮೊದಲ ಬಾರಿಗೆ ಜಿಲ್ಲೆಯಲ್ಲಿ ಕೆರೆಗಳನ್ನು ಡ್ರೋಣ್ ಮೂಲಕ ಸಮೀಕ್ಷೆ ಮಾಡಲಾಗಿದೆ. ಅಧಿಕಾರಿಗಳು ತಮ್ಮ ಕಾರ್ಯ ಕ್ಷೇತ್ರದ ಜವಾಬ್ದಾರಿಯನ್ನರಿತು ಸೇವಾ ಮನೋಭಾವದೊಂದಿಗೆ ಉತ್ತಮವಾಗಿ ಕಾರ್ಯ ನಿರ್ವಹಿಸಬೇಕು. ಆಡಳಿತಯಂತ್ರ ಚುರುಕಾಗಾಬೇಕು. ಜನರ ಸೇವೆ ಮಾಡಬೇಕು ಎಂದು ಅಧಿಕಾರಿಗಳಿಗೆ ಕಿವಿಮಾತು ಹೇಳಿದರು.

ಚನ್ನಪಟ್ಟಣ ತಾಲೂಕು ಆಸ್ಪತ್ರೆ ಕಿರಿದಾಗಿದ್ದು ಅದನ್ನು ವಿಸ್ತರಿಸಲು ಸಾಧ್ಯವಿಲ್ಲ, ಹೊಸ ಜಾಗ ಗುರುತಿಸಿ 200 ಹಾಸಿಗೆಗಳಿರುವ ಹೊಸ ಆಸ್ಪತ್ರೆ ನಿರ್ಮಿಸುವುದು ಮತ್ತು ಅಗತ್ಯವಿರುವ ವೈದ್ಯರು ಸೇರಿದಂತೆ ಸಿಬ್ಬಂದಿಗಳನ್ನು ಒದಗಿಸಲು ಕ್ರಮವಹಿಸಲಾಗುವುದು. ರಾಮನಗರದ ಅರ್ಚಕರಹಳ್ಳಿಯಲ್ಲಿ ನಿರ್ಮಿಸುತ್ತಿರುವ ರಾಜೀವ್ ಗಾಂಧಿ ಮೆಡಿಕಲ್ ಕಾಲೇಜಿನಲ್ಲಿ ಆಸ್ಪತ್ರೆ ನಿರ್ಮಾಣ ಮಾಡಲು ವೈದ್ಯಕೀಯ ಶಿಕ್ಷಣ ಇಲಾಖೆ ಸಚಿವರು ಹಾಗೂ ಕಾರ್ಯದರ್ಶಿಗಳೊಂದಿಗೆ ಚರ್ಚಿಸಲಾಗುವುದು ಎಂದು ಸಂಸದರು ಹೇಳಿದರು.

ಸಿಎಸ್‌ಆರ್ ನಿಧಿಯಡಿ ಕನಕಪುರ ತಾಲೂಕು ಆಸ್ಪತ್ರೆಗೆ ಅಗತ್ಯವಿರುವ 31 ಲಕ್ಷ ರು. ಮೌಲ್ಯದ ಶಸ್ತ್ರಚಿಕಿತ್ಸೆ ಪರಿಕರಗಳನ್ನು ಶ್ರೀಘ್ರವಾಗಿ ನೀಡಲಾಗುವುದು. ಬಿಸಿಲಿನ ತಾಪಮಾನದಿಂದ ತಪ್ಪಿಸಿಕೊಳ್ಳಲು ಅನುಸರಿಸಬೇಕಾದ ಅಗತ್ಯ ಕ್ರಮಗಳ ಕುರಿತು ಜನರಲ್ಲಿ ಅರಿವು ಮೂಡಿಸಬೇಕೆಂದು ಸೂಚಿಸಿದರು.

ಚನ್ನಪಟ್ಟಣದಲ್ಲಿ ಹಾವು ಕಚ್ಚಿ ಬಾಲಕ ಮೃತಪಟ್ಟಿರುವ ಘಟನೆ ನಡೆದಿದೆ. ಚನ್ನಪಟ್ಟಣದ ಆಸ್ಪತ್ರೆಯಲ್ಲಿ ಔಷಧಿ ಕೊರತೆ ಇಲ್ಲ, ಆದರೂ ವೈದ್ಯಾಧಿಕಾರಿಗಳ ನಿರ್ಲಕ್ಷ್ಯದಿಂದ ಬಾಲಕ ಮೃತಪಟ್ಟಿದ್ದಾನೆ. ಕೂಡಲೇ ಸಂಬಂಧಿಸಿದ ವೈದ್ಯಾಧಿಕಾರಿಗಳನ್ನು ಕೆಲಸದಿಂದ ಅಮಾನತುಗೊಳಿಸುವಂತೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯಲ್ಲಿ 24 ಪಶು ವೈದ್ಯರ ಹುದ್ದೆ ಖಾಲಿ ಇದೆ. ವೈದ್ಯರ ಹಾಗೂ ಔಷಧಿಗಳ ಕೊರತೆ ನಿವಾರಣೆಗೆ ಸಂಬಂಧಿಸಿದ ಇಲಾಖೆ ಕಾರ್ಯದರ್ಶಿಗೆ ಪತ್ರ ಬರೆಯಲಾಗುವುದು ಎಂದರು. ಆನೆಗಳ ಹಾವಳಿ ತಪ್ಪಿಸಲು ತಡೆಗೋಡೆ ನಿರ್ಮಾಣಕ್ಕೆ ಅಗತ್ಯ ಕ್ರಮ ವಹಿಸಬೇಕು ಎಂದು ಜಿಲ್ಲಾ ಅರಣ್ಯಾಧಿಕಾರಿಗೆ ತಿಳಿಸಿದರು.

ಪ್ರವಾಸೋದ್ಯಮ ಇಲಾಖೆ ವತಿಯಿಂದ ರಾಮನಗರದ ರಂಗರಾಯನದೊಡ್ಡಿ ಹಾಗೂ ನಲ್ಲಿಗುಡ್ಡೆಕೆರೆಗಳಲ್ಲಿ ಬೋಟಿಂಗ್ ಮಾಡಲಾಗಿದ್ದು, ಪ್ರವಾಸಿಗರ ಸುರಕ್ಷತೆಯ ದೃಷ್ಟಿಯಿಂದ ಕೆರೆಯಲ್ಲಿ ಬೆಳೆದಿರುವ [illegible] ತೆರವುಗೊಳಿಸುವಂತೆ ಮಂಜುನಾಥ್ ತಿಳಿಸಿದರು.

ಸಭೆಯಲ್ಲಿ ಜಿಲ್ಲಾಧಿಕಾರಿ ಯಶವಂತ್ ವಿ ಗುರುಕರ್, ಜಿಪಂ ಸಿಇಒ ಅನ್ಮೋಲ್ ಜೈನ್, ಅಪರ ಜಿಲ್ಲಾಧಿಕಾರಿ ಆರ್. ಚಂದ್ರಯ್ಯ, ಡಿವೈಎಸ್ಪಿ ರಾಜೇಂದ್ರ, ದಿಶಾ ಸಮಿತಿಯ ನಾಮನಿರ್ದೇಶನ ಸದಸ್ಯರಾದ ನರಸಿಂಹಮೂರ್ತಿ, ರಾಜೇಶ್, ಶಿವಣ್ಣ, ರೇಖಾ, ಶೋಭಾ, ಸಿದ್ಧರಾಮ, ಶ್ರೀನಿವಾಸ್ ಉಪಸ್ಥಿತರಿದ್ದರು.

ಬಸ್ಸಲ್ಲಿ ‘ವಾಂತಿ’ ನಾಟಕವಾಡಿ ಚಿನ್ನ ದೋಚುವ ಕುಪ್ಪಂ ಗ್ಯಾಂಗ್ ಅರೆಸ್ಟ್

ಕಳ್ಳತನಕ್ಕಾಗಿ ಮಕ್ಕಳನ್ನೇ ದಾಳವಾಗಿ ಬಳಸಿಕೊಳ್ಳುತ್ತಿದ್ದ ತಂಡ

ಹೊಸಕೋಟೆ: ಬಸ್ಸುಗಳಲ್ಲಿ ಪ್ರಯಾಣಿಕರ ಗಮನ ಬೇರೆಡೆ ಸೆಳೆದು ಕಳ್ಳತನ ಮಾಡುತ್ತಿದ್ದ ಕುಖ್ಯಾತ ‘ಕುಪ್ಪಂಗ್ಯಾಂಗ್’ ನ ಕಿಡಿಗೇಡಿಗಳನ್ನು ಹೊಸಕೋಟೆ ಪೊಲೀಸರು ಹೆಡೆಮುರಿಕಟ್ಟಿದ್ದಾರೆ. ಕಳ್ಳತನಕ್ಕಾಗಿ ಮಕ್ಕಳನ್ನೇ ದಾಳವಾಗಿ ಬಳಸಿಕೊಳ್ಳುತ್ತಿದ್ದ ಈ ತಂಡವೀಗ ಪೊಲೀಸರ ಅತಿಥಿಯಾಗಿದ್ದಾರೆ.

ದಿವಾಕರ್‌ಬಂಧಿತ. ತಂಡದ ಇತರ ಸದಸ್ಯರಾದ ಮೋನಿಷಾ, ಗಾಯತ್ರಿ ಮತ್ತು ಇಂದ್ರಾಗಾಗಿ ಪೊಲೀಸರು ಬಲೆ ಬೀಸಿದ್ದಾರೆ. ತಂಡದ ಸದಸ್ಯರು ಕೆಎಸ್‌ಆರ್‌ಟಿಸಿ ಮತ್ತು ಖಾಸಗಿ ಬಸ್ಸುಗಳನ್ನು ಗುರಿಯಾಗಿಸಿಕೊಂಡು ಕಳ್ಳತನ ಮಾಡುತ್ತಿದ್ದರು. ಇವರ ಕಳ್ಳತನದ ಶೈಲಿ ವಿಭಿನ್ನವಾಗಿತ್ತು.

ಬಸ್ಸಿನಲ್ಲಿ ಮಕ್ಕಳೊಂದಿಗೆ ಪ್ರಯಾಣಿಸುತ್ತಿದ್ದ ಈ ಗ್ಯಾಂಗ್, ಜನನಿಬಿಡ ಸಂದರ್ಭದಲ್ಲಿ ಮಕ್ಕಳಿಗೆ ವಾಂತಿ ಬರುತ್ತಿದೆ ಎಂದು ನಾಟಕ ಮಾಡುತ್ತಿದ್ದರು. ವಾಂತಿ ಮಾಡುತ್ತಿರುವ ಮಗುವನ್ನು ಕಂಡು ಪ್ರಯಾಣಿಕರು ಅಯ್ಯೋ ಎನ್ನುತ್ತಾ ಸಹಾಯಕ್ಕೆ ಮುಂದಾದಾಗ ಅಥವಾ ಗಮನ ಬೇರೆಡೆ ಹರಿಸಿದಾಗ, ಅದೇ ಸಮಯವನ್ನು ಬಳಸಿಕೊಂಡು ಅವರ ಬಳಿಯಿರುವ ಚಿನ್ನಾಭರಣ ದೋಚಿ ಎಸ್ಕೇಪ್ ಆಗುತ್ತಿದ್ದರು.



ಹೊಸಕೋಟೆ ಪೊಲೀಸರು ಬಂಧಿತರಿಂದ ವಶಪಡಿಸಿಕೊಂಡಿರುವ ಹಣ ಹಾಗೂ ಒಡವೆಗಳು.

ಹೊಸಕೋಟೆ ಠಾಣಾ ವ್ಯಾಪ್ತಿಯಲ್ಲಿ ಇತ್ತೀಚೆಗೆ ಬಸ್ಸಿನಲ್ಲಿ ಪ್ರಯಾಣಿಸುತ್ತಿದ್ದ ವೃದ್ಧೆಯೊಬ್ಬರ ಗಮನ ಬೇರೆಡೆ ಸೆಳೆದಿದ್ದ ಈ ಖದೀಮರು, ಅವರ ಕೊರಳಿನಲ್ಲಿದ್ದ 74 ಗ್ರಾಂ ತೂಕದ ಚಿನ್ನದ ಮಾಂಗಲ್ಯ ಸರ ಕದ್ದು ಪರಾರಿಯಾಗಿದ್ದರು. ಈ ಬಗ್ಗೆ ದಾಖಲಾದ ದೂರಿನನ್ವಯ ಪೊಲೀಸರು ವಿಶೇಷ ಕಾರ್ಯಾಚರಣೆ ಕೈಗೊಂಡಿದ್ದರು. ಬಂಧಿತನಿಂದ 12 ಲಕ್ಷ ಮೌಲ್ಯದ ಚಿನ್ನಾಭರಣ, 3.50 ಲಕ್ಷ ನಗದನ್ನು ವಶಪಡಿಸಿಕೊಂಡಿದ್ದಾರೆ.

ಮರು ಮೌಲ್ಯಮಾಪನ: ಹೊಯ್ಸಳ ಕಾಲೇಜಿಗೆ ಶೇ.100 ಫಲಿತಾಂಶ

ಕನ್ನಡ ವಿಷಯದಲ್ಲಿ ಅನುತ್ತೀರ್ಣನಾಗಿದ್ದ ವಿದ್ಯಾರ್ಥಿ ತೇರ್ಗಡೆ

ದಾಬಸ್‌ಪೇಟೆ: ಪಟ್ಟಣದ ಹೊಯ್ಸಳ- ವಿದ್ಯಾಸ್ಫೂರ್ತಿ ಕಾಲೇಜು ಮರು ಮೌಲ್ಯ ಮಾಪನದಲ್ಲಿ ಅನುತ್ತೀರ್ಣನಾದ ವಿದ್ಯಾರ್ಥಿ ಉತ್ತೀರ್ಣನಾಗಿರುವ ಹಿನ್ನೆಲೆಯಲ್ಲಿ ಕಾಲೇಜಿಗೆ ಶೇ.100 ಫಲಿತಾಂಶ ಬಂದಿದೆ ಎಂದು ಪ್ರಾಂಶುಪಾಲ ಗೌರಿಶಂಕರ್ ತಿಳಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 2026ರಲ್ಲಿ ಹೊಯ್ಸಳ- ವಿದ್ಯಾಸ್ಫೂರ್ತಿ ಕಾಲೇಜು ಶೇ.99.60 ಸಾಧನೆ ಮಾಡಿತ್ತು. ಒಬ್ಬ ವಿದ್ಯಾರ್ಥಿ ಕನ್ನಡ ವಿಷಯದಲ್ಲಿ ಅನುತ್ತೀರ್ಣಗೊಂಡಿದ್ದ, ಮರು ಮೌಲ್ಯ ಮಾಪನದಲ್ಲಿ ಆ ವಿದ್ಯಾರ್ಥಿ ತೇರ್ಗಡೆ ಹೊಂದಿ ಶೇ.100 ಫಲಿತಾಂಶ ಕಾಲೇಜಿಗೆ ಲಭಿಸಿದೆ ಎಂದು ಪ್ರಾಂಶುಪಾಲರು ಸಂತಸ ಹಂಚಿಕೊಂಡಿದ್ದಾರೆ. ಈಗಾಗಲೇ ಕಾಲೇಜಿನ ವಿಜ್ಞಾನ ವಿಭಾಗದಲ್ಲಿ ಶೇ.100, ವಾಣಿಜ್ಯ ವಿಭಾಗದಲ್ಲಿ ಒಟ್ಟು ಶೇ.99.60 ಫಲಿತಾಂಶ ಪಡೆದಿದ್ದು, ವಿಜ್ಞಾನ ವಿಭಾಗ ದಲ್ಲಿ ಕುಸುಮಾ 593 ಅಂಕ ಪಡೆದು ರಾಜ್ಯಕ್ಕೆ 7ನೇ ಸ್ಥಾನವನ್ನು ಪಡೆದು ಕೀರ್ತಿ ತಂದಿದ್ದಾರೆ.



ಒಟ್ಟು 414 ವಿದ್ಯಾರ್ಥಿಗಳಲ್ಲಿ 191 ಅತ್ಯುನ್ನತ ಶ್ರೇಣಿ, 220 ಪ್ರಥಮ ಶ್ರೇಣಿಯಲ್ಲಿ 3 ದ್ವಿತೀಯ ಶ್ರೇಣಿಯಲ್ಲಿ ಉತ್ತೀರ್ಣರಾಗಿದ್ದಾರೆ. ವಿಜ್ಞಾನ ವಿಭಾಗದಲ್ಲಿ 234 ವಿದ್ಯಾರ್ಥಿಗಳಲ್ಲಿ 104 ಅತ್ಯುನ್ನತ ಶ್ರೇಣಿ, 128 ಪ್ರಥಮ ಶ್ರೇಣಿ, 2 ವಿದ್ಯಾರ್ಥಿಗಳು ದ್ವಿತೀಯ ಶ್ರೇಣಿಯಲ್ಲಿ ಉತ್ತೀರ್ಣರಾಗಿದ್ದಾರೆ. ವಾಣಿಜ್ಯ ವಿಭಾಗದಲ್ಲಿ 180 ವಿದ್ಯಾರ್ಥಿಗಳಲ್ಲಿ 87 ಅತ್ಯುನ್ನತ ಶ್ರೇಣಿ, 92 ಪ್ರಥಮ ಶ್ರೇಣಿಯಲ್ಲಿ ಉತ್ತೀರ್ಣರಾಗಿ ಕಾಲೇಜಿಗೆ ಕೀರ್ತಿ ತಂದಿದ್ದಾರೆ.

ಈ ವೇಳೆ ಪದವಿ ಕಾಲೇಜಿನ ಪ್ರಾಂಶುಪಾಲ ಗೋಪಾಲ್, ಉಪಪ್ರಾಂಶು ಪಾಲ ರವಿ, ವಿಜ್ಞಾನ ವಿಭಾಗದ ಮುಖ್ಯಸ್ಥ ವಿಕಾಸ್ ಉಪಸ್ಥಿತರಿದ್ದರು.

ಕನ್ನಡಪ್ರಭ
ಶುಕ್ರವಾರ 8.05.2026


ಗರಿಷ್ಠ 32 c | ಕನಿಷ್ಠ 22 c



ರಾಜ್ಯ ಮಟ್ಟದ ಕಾಯಕರತ್ನ ಪ್ರಶಸ್ತಿ ಪುರಸ್ಕೃತರಾದ ನೆಲಮಂಗಲ ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಸಿ.ರಮೇಶ್ ಅವರನ್ನು ನೆಲಮಂಗಲ ತಾಲೂಕಿನ ವಿವಿಧ ಸರ್ಕಾರಿ ಹಾಗೂ ಅನುದಾನಿಕ ಶಾಲೆಗಳ ಶಿಕ್ಷಕರು, ಕ್ಷೇತ್ರ ಶಿಕ್ಷಣಾಧಿಕಾರಿ ಇಲಾಖೆಯ ಕಚೇರಿ ಸಿಬ್ಬಂದಿ ವರ್ಗ ಅಭಿನಂದಿಸಿ ಶುಭ ಕೋರಿದರು.



ಮಾಗಡಿಯಲ್ಲಿ ನೆಲೆಸಿರುವ ಅಣ್ಣಮ್ಮ ಜ್ಯೋತಿ ಮತ್ತು ಮುನೀಶ್ವರ ದೇವಸ್ಥಾನದ 26ನೇ ವಾರ್ಷಿಕೋತ್ಸವ ಅದ್ದೂರಿಯಾಗಿ ನೆರವೇರಿಸಲಾಯಿತು. ಅಣ್ಣಮ್ಮ ದೇವಿಯ ಉತ್ಸವ ಮೂರ್ತಿ ಜ್ಯೋತಿನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ, ಮಹಿಳೆಯರು ಮಡಿಲಕ್ಕಿ ತುಂಬಿ ದೇವಿ ಕೃಪೆಗೆ ಪಾತ್ರರಾದರು.



ಉಜ್ಜನಿ ಹೊಸಹಳ್ಳಿ ಲಕ್ಷ್ಮೀ ನರಸಿಂಹಸ್ವಾಮಿ ತೇರು

ದೊಡ್ಡಬಳ್ಳಾಪುರ: ತಾಲೂಕಿನ ಉಜ್ಜನಿ ಹೊಸಹಳ್ಳಿಯಲ್ಲಿ ಶ್ರೀಲಕ್ಷ್ಮಿನರಸಿಂಹಸ್ವಾಮಿ ರಥೋತ್ಸವ ಸಹಸ್ರಾರು ಭಕ್ತರ ಸಮ್ಮುಖದಲ್ಲಿ ವಿಜೃಂಭಣೆಯಿಂದ ನೆರವೇರಿತು. ರಥೋತ್ಸವದ ಪ್ರಯುಕ್ತ ದೇವಾಲಯದಲ್ಲಿ ವಿಶೇಷ ಅಭಿಷೇಕ ನೆರವೇರಿಸಲಾಯಿತು. ಸ್ವಾಮಿಯನ್ನು ಪಂಚ ಕಳಸ ಹೊತ್ತ ರಥದಲ್ಲಿ ಪ್ರತಿಷ್ಠಾಪಿಸುತಿದ್ದಂತೆ ಮಧ್ಯಾಹ್ನ 3ಕ್ಕೆ ವೇದಬ್ರಹ್ಮರ ಮಂತ್ರ ಘೋಷಗಳೊಂದಿಗೆ ರಥ ಮುಂದೆ ಸಾಗಿತು. ಭಕ್ತರು ರಥಕ್ಕೆ ಬಾಳೆಹಣ್ಣು-ಧವನ ಎಸೆದು ಹರಕೆ ತೀರಿಸಿದರು. ರಥವನ್ನು ಮುಖ್ಯ ಬೀದಿಯಿಂದ ಗೊಡ್ಡರಾಯಿಕಲ್ಲಿನವರೆಗೆ ಭಕ್ತರು ಎಳೆದು ತಂದರು.

ಸುದ್ದಿ ಸಿಂಚನ

ಮಹಾರಾಷ್ಟ್ರದಲ್ಲಿ ನಡೆದ ಹಿಂದ್ ಕೇಸರಿ ಕುಸ್ತಿ ಪಂದ್ಯಕ್ಕೆ ಆಯ್ಕೆ



ಕನಕಪುರ: ಕರ್ನಾಟಕ ರಾಜ್ಯ ಕುಸ್ತಿ ತಂಡಕ್ಕೆ ಪುರುಷರ 55 ಕೆಜಿ ವಿಭಾಗದಲ್ಲಿ ಆರ್.ಅಭಿಷೇಕ್, 85+ ವಿಭಾಗದಲ್ಲಿ ಎನ್.ಮನೋಜ್ ಹಾಗೂ ಮಹಿಳೆಯರ 62 ಕೆಜಿ ವಿಭಾಗದಲ್ಲಿ ರಕ್ಷಿತಾ ಕೋಮರ್, 75+ ಕೆಜಿ ವಿಭಾಗದಲ್ಲಿ ಎನ್. ರಮ್ಯಾ ಬಾಯಿ ಆಯ್ಕೆಯಾಗಿದ್ದಾರೆ. ಮಹಾರಾಷ್ಟ್ರದ ಸತಾರದಲ್ಲಿ ಇಂಡಿಯನ್ ಸ್ಟೈಲ್ ರೆಸ್ಲಿಂಗ್ ಅಸೋಸಿಯೇಷನ್ ಆಫ್ ಇಂಡಿಯಾ ಮೇ 14ರಿಂದ 17ರವರೆಗೆ ನಡೆಸಲಿರುವ ರಾಷ್ಟ್ರಮಟ್ಟದ ಪ್ರತಿಷ್ಠಿತ ಹಿಂದ್ ಕೇಸರಿ ಕುಸ್ತಿ ಪಂದ್ಯಾವಳಿಯಲ್ಲಿ ಭಾಗವಹಿಸಲು ಆಯ್ಕೆಯಾಗಿದ್ದಾರೆ. ಇವರು ನಗರದ ಕುಸ್ತಿ ತರಬೇತಿದಾರ ಕೆ.ಎನ್.ವಿಜಯ್ ಕುಮಾರ್‌ಬಳಿ ತರಬೇತಿ ಪಡೆಯುತ್ತಿದ್ದಾರೆ. ರಾಮನಗರ ಜಿಲ್ಲಾ ಆಮಚೂರ್‌ಕುಸ್ತಿ ಸಂಘ ಮತ್ತು ರಾಮನಗರ ಜಿಲ್ಲಾ ಭಾರತೀಯ ಶೈಲಿ ಕುಸ್ತಿ ಸಂಘ ಹಾಗು ಚಾವಡಿ ಗರಡಿಯ ಉಸ್ತಾದ್, ಕಲೀಪರು, ಹಿರಿಯ ಮತ್ತು ಕಿರಿಯ ಪೈಲ್ವಾನರು ಅಭಿನಂದನೆ ಸಲ್ಲಿಸಿ ಶುಭ ಕೋರಿದ್ದಾರೆ.

ಕೊಳವೆಬಾವಿಗಳ ಕೇಬಲ್ ಕಳ್ಳನ ಸೆರೆ



ದಾಬಸ್‌ಪೇಟೆ: ತ್ಯಾಮಗೊಂಡ್ಲು ರೈತರ ಕೃಷಿ ಪಂಪ್‌ಸೆಟ್‌ಗಳು ಹಾಗೂ ಗ್ರಾಪಂಗಳು ನೀರು ಪೂರೈಸುವ ಕೊಳವೆ ಬಾವಿಗೆ ಅಳವಡಿಸಿರುವ ಪಂಪ್‌ಸೆಟ್‌ಗಳಲ್ಲಿನ ಕೇಬಲ್ ಕಳವು ಮಾಡುತ್ತಿದ್ದ ಕಳ್ಳನನ್ನು ವಾದಕುಂಟೆ ಗ್ರಾಮಸ್ಥರು ಹಿಡಿದು, ಪೊಲೀಸರಿಗೆ ಒಪ್ಪಿಸಿದ್ದಾರೆ. ನೆಲಮಂಗಲದ ಇಸ್ಲಾಂಪು ನಿವಾಸಿ ಮಹಮ್ಮದ್ ರೋಷನ್(28) ಕೇಬಲ್ ಕಳವು ಸಮಯದಲ್ಲಿ ಸಿಕ್ಕಿಬಿದ್ದವನು. ಈತನನ್ನು ಗ್ರಾಮಸ್ಥರು ಹಿಡಿದು ಬಟ್ಟೆ ಬಿಚ್ಚಿ ಗ್ರಾಮದಲ್ಲಿ ಮೆರವಣಿಗೆ ಮಾಡಿ, ನಂತರ 112ಗೆ ಕರೆ ಮಾಡಿ ಪೊಲೀಸರಿಗೆ ಒಪ್ಪಿಸಿದ್ದಾರೆ. ಮತ್ತೊಬ್ಬ ಪರಾರಿಯಾಗಿದ್ದಾನೆ.ವಾದಕುಂಟೆ ಗ್ರಾಮದ ತೋಟಗಳಲ್ಲಿ ಅನುಮಾನಾಸ್ಪದವಾಗಿ ಓಡಾಡುತ್ತಿದ್ದ ಇಬ್ಬರನ್ನು ಕಂಡ ಗ್ರಾಮದ ಯುವಕರು, ಎರಡು ಗುಂಪು ಮಾಡಿಕೊಂಡು ಒಬ್ಬ ಕಳ್ಳನನ್ನು ಹಿಡಿದಿದ್ದಾರೆ.

ಚೇತನ್‌ಟೆಂಕರ್ ನಿಧನ

ಕನಕಪುರ: ನಗರದ ಡಾ. ಚೇತನ್ ಟೆಂಕರ್(58) ನಿಧನರಾಗಿದ್ದಾರೆ. ನಗರದ ಕೆ.ಎಚ್.ವೃತ್ತದ ಬಳಿ ನವೋದಯ ಕ್ಲಿನಿಕ್ ತೆರೆದು ಕಿವಿ, ಮೂಗು, ಗಂಟಲು



(ಇಎನ್‌ಟಿ) ತಜ್ಞರಾಗಿ ತಾಲೂಕಿನ ಜನತೆಗೆ ಉತ್ತಮ ಸೇವೆ ಸಲ್ಲಿಸುತ್ತಿದ್ದ ಇವರು ಬುಧವಾರ ಬೆಳಗ್ಗೆ ಅಕಾಲಿಕ ಮರಣ ಹೊಂದಿದ್ದಾರೆ. ವೈದ್ಯಕೀಯ ಸೇವೆ ಜೊತೆಗೆ ಹಲವು ಸಂಘ ಸಂಸ್ಥೆಗಳಲ್ಲಿ ತೊಡಗಿಸಿಕೊಂಡಿದ್ದರು. ಇವರು ಪತ್ನಿ, ಪುತ್ರರನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆ ನಗರದ ಕುರಪೇಟೆ ಬಳಿಯ ಹಿಂದೂ ರುದ್ರಭೂಮಿಯಲ್ಲಿ ನೆರವೇರಿಸಲಾಯಿತು.

ಜೆಡಿಎಸ್ ಜಾತ್ಯತೀತ ಅಲ್ಲ, ಜಾತಿವ್ಯಾಧಿ ಪಕ್ಷ

ಶಾಸಕ ಇಕ್ಬಾಲ್ ಹುಸೇನ್ ಸರ್ವ ಧರ್ಮಗಳ ಸಮನ್ವಯ ನಾಯಕ | ಆಕಸ್ಮಿಕ ಘಟನೆಗಳಿಗೆ ಶಾಸಕರನ್ನು ಹೊಣೆ ಮಾಡಿದರೆ ಅರ್ಥವಿಲ್ಲ: ನಾಗೇಂದ್ರ

• **ಕನ್ನಡಪ್ರಭ ವಾರ್ತೆ** ರಾಮನಗರ

ಬಿಜೆಪಿಯೊಂದಿಗೆ ಮೈತ್ರಿ ಸಾಧಿಸಿರುವ ಜೆಡಿಎಸ್ ಜಾತ್ಯತೀತ ಪಕ್ಷವಾಗಿ ಉಳಿದಿಲ್ಲ. ಅದೊಂದು ಜಾತಿ ವ್ಯಾಧಿ ಪಕ್ಷವಾಗಿ ರೂಪುಗೊಂಡಿದೆ. ಹೀಗಾಗಿಯೇ ಶ್ರೀ ರೇವಣಸಿದ್ದೇಶ್ವರಸ್ವಾಮಿ ರಥೋತ್ಸವ ವೇಳೆ ಸಂಭವಿಸಿದ ಆಕಸ್ಮಿಕ ಘಟನೆಗಳಿಗೆ ಶಾಸಕ ಇಕ್ಬಾಲ್ ಹುಸೇನ್ ಅವರನ್ನು ಹೊಣೆಗಾರರನ್ನಾಗಿ ಮಾಡಿ ಧಾರ್ಮಿಕ ಕಾರ್ಯಕ್ರಮದಲ್ಲಿಯೂ ರಾಜಕಾರಣ ಮಾಡಲು ಹೊರಟಿದೆ ಎಂದು ಜೆಡಿಎಸ್ ಮುಖಂಡರ ವಿರುದ್ಧ ಹುಲಿಕೆರೆ-ಗುನ್ನೂರು ಗ್ರಾಪಂ ಮಾಜಿ ಅಧ್ಯಕ್ಷ ನಾಗೇಂದ್ರ ವಾಗ್ದಾಳಿ ನಡೆಸಿದರು.

ಶ್ರೀ ರೇವಣಸಿದ್ದೇಶ್ವರ ಬೆಟ್ಟದ ತಪ್ಪಲಿನಲ್ಲಿರುವ ಕಾರ್ಯನಿರ್ವಾಹಕ ಅಧಿಕಾರಿ ಕಚೇರಿ ಬಳಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಶಾಸಕ ಇಕ್ಬಾಲ್ ಹುಸೇನ್ ಅಲ್ಪಸಂಖ್ಯಾತ ಸಮುದಾಯಕ್ಕೆ ಸೇರಿದವರಾದರು ಒಂದು ವರ್ಗಕ್ಕೆ ಸೀಮಿತರಾಗಿ ನಡೆದುಕೊಂಡಿಲ್ಲ. ಎಲ್ಲ ಜಾತಿ ಧರ್ಮಗಳು ಮತ್ತು ಜನರನ್ನು ಗೌರವಿಸುವ ಅವರು ಸರ್ವ ಧರ್ಮಗಳ ಸಮನ್ವಯ ನಾಯಕರಾಗಿದ್ದಾರೆ ಎಂದರು.

ಶ್ರೀ ರೇವಣಸಿದ್ದೇಶ್ವರ ಬೆಟ್ಟದಲ್ಲಿ ಹಿಂದೂ ಪಂಚಾಂಗ ಪ್ರಕಾರ ಮಧ್ಯಾಹ್ನ 12.45ರಿಂದ 1.30 ರವರೆಗೆರಥೋತ್ಸವಕ್ಕೆಮುಹೂರ್ತನಿಗದಿಯಾಗಿತ್ತು. ಈ ವಿಚಾರ ತಿಳಿದಿದ್ದ ಶಾಸಕರು ತಾವು ಬರುವುದು ತಡವಾಗಬಹುದು. ನಿಗದಿತ ಸಮಯಕ್ಕೆ ರಥೋತ್ಸವ ನೆರವೇರಿಸುವಂತೆ ಹೇಳಿದ್ದರು. 10 ನಿಮಿಷ ತಡವಾದರು ಸರಿ ಶಾಸಕರು ಬರಲೆಂದು ಸ್ಥಳೀಯರು ಒತ್ತಾಯಿಸಿದ್ದರು. 10ರಿಂದ 15 ನಿಮಿಷ ತಡವಾಗಿ



ಹುಲಿಕೆರೆ-ಗುನ್ನೂರು ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ನಾಗೇಂದ್ರ ಸುದ್ದಿಗಾರರೊಂದಿಗೆ ಮಾತನಾಡಿದರು.

ಆಗಮಿಸಿದ ಶಾಸಕರು ಆ ದಿನವೇ ತಡವಾಗಿದ್ದಕ್ಕೆ ವಿಷಾದ ವ್ಯಕ್ತಪಡಿಸಿದ್ದರು. ಆದರೆ, ನಿರುದ್ಯೋಗಿಗಳಾಗಿರುವ ಜೆಡಿಎಸ್ ಮುಖಂಡರು ಇದನ್ನೇ ದೊಡ್ಡ ಅಪರಾಧ ಎನ್ನುವಂತೆ ಬಿಂಬಿಸುತ್ತಿದ್ದಾರೆ ಎಂದು ಟೀಕಿಸಿದರು.

ಶಾಸಕ ಇಕ್ಬಾಲ್ ಹುಸೇನ್ ಶೂ ಧರಿಸಿಕೊಂಡೇ ಶುಭ ಮುಹೂರ್ತ ಮೀರಿದ ಬಳಿಕ ರಥೋತ್ಸವಕ್ಕೆ ಚಾಲನೆ ನೀಡಿದ್ದೆ ವಿಘ್ನಗಳು ಸಂಭವಿಸಲು ಕಾರಣವೆಂದು ಜೆಡಿಎಸ್ ನವರು ಆರೋಪಿಸಿದ್ದಾರೆ. ಶಾಸಕರು ಶೂ ಕಳಚಿ ರಥ ಎಳೆದಿರುವುದಕ್ಕೆ ಜನರೇ ಸಾಕ್ಷಿಯಾಗಿದ್ದಾರೆ. ಇನ್ನು ಜೆಡಿಎಸ್ ಶಾಸಕರಿದ್ದ ಅವಧಿಯಲ್ಲಿ 2003-04ರಲ್ಲಿ ರಥಕ್ಕೆ ಸಿಲುಕುತ್ತಿದ್ದ ಇಬ್ಬರನ್ನು ಪಾರು ಮಾಡಲಾಗಿತ್ತು. ಆದರೂ 2 ಬೈಕ್, 1 ಕಾರು ಜಖಂಗೊಂಡಿತ್ತು. 2009-10ರಲ್ಲಿ ರಥದ ಈರ್ಚ ಮುರಿಯಿತು. 2012-13ರಲ್ಲಿ ಚಿಕ್ಕೋನಯ್ಯನ ಕಾಲಿನ ಪಾದ ಕತ್ತರಿಸಿತು. 2018ರಲ್ಲಿ ಅರ್ಚಕರು ಕೊಂಡಕ್ಕೆ ಬಿದ್ದು ಗಾಯಗೊಂಡರು. ಈ ಅವಘಡಗಳಿಗೆಲ್ಲ ಜೆಡಿಎಸ್ ಶಾಸಕರಲ್ಲದೆ ಮತ್ಯಾರು ಹೊಣೆಗಾರರು ಎಂದು ಪ್ರಶ್ನಿಸಿದರು.

ಶ್ರೀ ರೇವಣಸಿದ್ದೇಶ್ವರ ಸ್ವಾಮಿ ದೇವಸ್ಥಾನಕ್ಕೆ ನೀರಿಲ್ಲದ ಕಾರಣ ಭಕ್ತರಿಗೆ ತೊಂದರೆಯಾಗುತ್ತಿತ್ತು. ಈ ವಿಚಾರ ತಿಳಿದ ಶಾಸಕರು ಒಂದೇ ದಿನದಲ್ಲಿ ಬೋರ್‌ವೆಲ್ ಕೊರೆಸಿ ನೀರಿನ ವ್ಯವಸ್ಥೆ ಕಲ್ಪಿಸಿದರು. ಶಾಸಕರ ನಿಧಿಯಿಂದ 4.50 ಕೋಟಿ ವೆಚ್ಚದಲ್ಲಿ ಲಿಫ್ಟ್ ಕಾಮಗಾರಿಗೆ ಅನುಮೋದನೆ ಸಿಕ್ಕಿದ್ದು, ಶೀಘ್ರದಲ್ಲಿಯೇ ಕಾಮಗಾರಿ ಪ್ರಾರಂಭಗೊಳ್ಳಲಿದೆ. ಇದು ಶಾಸಕ ಇಕ್ಬಾಲ್ ಹುಸೇನ್ ಈ ಕ್ಷೇತ್ರದ ಮೇಲೆ ಹೊಂದಿರುವ ಭಕ್ತಿ ತೋರಿಸುತ್ತದೆ ಎಂದರು.

ಈಗ ಕ್ಷೇತ್ರದಲ್ಲಿ ಒಂದೂವರೆ ಸಾವಿರ ಕೋಟಿ ರು.ಗಳಿಗೂ ಅಧಿಕ ಮೊತ್ತದ ಅಭಿವೃದ್ಧಿ ಕಾಮಗಾರಿಗಳು ನಡೆಯುತ್ತಿವೆ. 20-25

> **ಶ್ರೀರೇವಣಸಿದ್ದೇಶ್ವರ ರಥೋತ್ಸವ ವೇಳೆ ಆಕಸ್ಮಿಕ ಘಟನೆಗಳು ಸಂಭವಿಸುತ್ತಲೇ ಬಂದಿವೆ. ಅದಕ್ಕೆ ಶಾಸಕರನ್ನು ಹೊಣೆಗಾರರನ್ನಾಗಿ ಮಾಡುವುದರಲ್ಲಿ ಅರ್ಥವಿಲ್ಲ. ರಥೋತ್ಸವ ವೇಳೆ ಗಾಯಗೊಂಡು ಚಿಕಿತ್ಸೆ ಪಡೆಯುತ್ತಿರುವ ಶಿವರುದ್ರ ಕೋಟಹಳ್ಳಿ ಅವರನ್ನು ಶಾಸಕರು ಭೇಟಿಯಾಗಿ ಸಾಂತ್ವನ ಹೇಳಿ ಧನ ಸಹಾಯ ಮಾಡಿದ್ದಾರೆ. ಅಲ್ಲದೆ, ಸಿಎಂ ಪರಿಹಾರ ನಿಧಿಯಿಂದಲೂ ಪರಿಹಾರ ಕೊಡಿಸುವ ಭರವಸೆ ನೀಡಿದ್ದಾರೆ. ಜೆಡಿಎಸ್ ಮುಖಂಡರಿಗೆ ನೈತಿಕತೆ ಇದ್ದರೆ ಚಿಕಿತ್ಸಾ ವೆಚ್ಚದಲ್ಲಿ ಸಂಸದರಿಂದ ರಿಯಾಯಿತಿ ಕೊಡಿಸಲಿ.**
>
> • **ಮಹದೇವಯ್ಯ,** ಸದಸ್ಯರು, ಹುಲಿಕೆರೆ-ಗುನ್ನೂರು ಗ್ರಾಪಂ

ವರ್ಷಗಳಿಂದ ಆಗದಿರುವ ಕೆಲಸಗಳಿಗೂ ಚಾಲನೆ ಸಿಕ್ಕಿವೆ. ವಾರದಲ್ಲಿ 5 ದಿನ ಕ್ಷೇತ್ರದಲ್ಲಿರುತ್ತಾರೆ. ಶಾಸಕರ ಕಚೇರಿಯಲ್ಲಿ ಪ್ರತಿ ದಿನ ನೂರಾರು ಜನರನ್ನು ಭೇಟಿ ಮಾಡಿ ಕಷ್ಟ ಸುಖಗಳಿಗೆ ಸ್ಪಂದಿಸುತ್ತಿದ್ದಾರೆ. ಶಾಸಕರ ಜನಪ್ರಿಯತೆ ಸಹಿಸದ ಜೆಡಿಎಸ್‌ನವರು ಧಾರ್ಮಿಕ ವಿಚಾರದಲ್ಲಿ ರಾಜಕೀಯ ಬೆರೆಸಿ ಅಪಪ್ರಚಾರ ಮಾಡುತ್ತಿದ್ದಾರೆ ಎಂದು ನಾಗೇಂದ್ರ ಟೀಕಿಸಿದರು.

ದೇಗುಲಗಳಿಗೆ ಧನ ಸಹಾಯ ಮಾಡಿದವರು ಹಿಂದೂ ವಿರೋಧಿಯೇ: ಯುವ ಕಾಂಗ್ರೆಸ್ ಮುಖಂಡ ಎನ್.ಹರ್ಷನಂದನ್ ಮಾತನಾಡಿ, ಶಾಸಕ ಇಕ್ಬಾಲ್ ಹುಸೇನ್ ಜಿಪಂ ಅಧ್ಯಕ್ಷರಾಗಿದ್ದ ದಿನದಿಂದ ಇಲ್ಲಿವರೆಗೆ ನೂರಾರು ದೇವಾಲಯಗಳ ನಿರ್ಮಾಣಕ್ಕೆ ಧನ ಸಹಾಯ ಮಾಡಿದ್ದಾರೆ.

ಶ್ರೀ ರೇವಣ ಸಿದ್ದೇಶ್ವರಸ್ವಾಮಿ ಮಠಕ್ಕೆ ಲಕ್ಷಾಂತರ ರುಪಾಯಿಗಳ ಗ್ರಾನೈಟ್ ಕೊಟ್ಟಿದ್ದಾರೆ. ಜಾತಿ ಧರ್ಮ ನೋಡದೆ ಕಷ್ಟ ಹೇಳಿಕೊಂಡು ಬಂದವರಿಗೆ ಕೈಲಾದ ಸಹಾಯ ಮಾಡಿದ್ದಾರೆ. ಜೆಡಿಎಸ್ ಶಾಸಕರಾಗಿದ್ದವರು ಎಷ್ಟು ದೇವಾಲಯಗಳಿಗೆ ಧನ ಸಹಾಯ ಮಾಡಿದ್ದಾರೆಂದು ಬಹಿರಂಗ ಪಡಿಸಲಿ ಎಂದು ಸವಾಲು ಹಾಕಿದರು.

ರಾಮನಗರ ಕ್ಷೇತ್ರದಲ್ಲಿ ಹಿಂದೂ ಸಮುದಾಯಕ್ಕೆ ಸೇರಿದವರೇ ಶಾಸಕರಾಗಿ ಆಯ್ಕೆಯಾಗುತ್ತಾ ಬಂದಿದ್ದರು. ಅವರ್ಯಾರಿಗೂ ಶ್ರೀರಾಮ ನೆನಪಿಗೆ ಬರಲೇ ಇಲ್ಲ. ಆದರೆ, ಇಕ್ಬಾಲ್ ಹುಸೇನ್ ಶ್ರೀರಾಮೋತ್ಸವ ಆಚರಿಸಿ ಇತಿಹಾಸ ಸೃಷ್ಟಿಸಿದರು. ಅಲ್ಲದೆ, ಕ್ಷೇತ್ರದಲ್ಲಿನ ಗ್ರಾಮಗಳ ದೇವ ದೇವತೆಗಳ ಅದ್ದೂರಿ ಮೆರವಣಿಗೆ ನಡೆಸಿ ಭಕ್ತಿ ಪ್ರದರ್ಶಿಸಿದರು. ಇಷ್ಟೆಲ್ಲ ಮಾಡಿದ ಶಾಸಕ ಇಕ್ಬಾಲ್ ಹುಸೇನ್ ಹಿಂದೂ ವಿರೋಧಿಯಾಗಲು ಹೇಗೆ ಸಾಧ್ಯ ಎಂದು ಪ್ರಶ್ನಿಸಿದರು.

ಸುದ್ದಿಗೋಷ್ಠಿಯಲ್ಲಿ ಸೇವಾ ಸಮಿತಿ ಅಧ್ಯಕ್ಷ ಎನ್.ರಮೇಶ್, ಮುಖಂಡರಾದ ಕುಮಾರ್, ಕುರುಬಳ್ಳಿ ದೊಡ್ಡಿ ಪ್ರಕಾಶ್, ಕೆ.ಜಿ.ಹೊಸಳ್ಳಿ ಅರುಣ್, ಕೋಟಳ್ಳಿ ಲಿಂಗರಾಜು, ದೇವರದೊಡ್ಡಿ ಚಂದ್ರನಾಯ್ಕ, ಸಂದೀಪ್, ಚೇತನ್, ಲೋಕೇಶ್, ಕಿರಣ್, ನೆಲಮನೆ ಸಿದ್ದರಾಜು ಇತರರಿದ್ದರು.

ತುರ್ತು ಆರೋಗ್ಯ ಸೇವೆಗೆ ಇ-ಬೈಕ್ ಸಹಕಾರಿ

ಜಿಲ್ಲೆಯ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಸಂಚಾರಿ ಇ-ಬೈಕ್ ಹಸ್ತಾಂತರ

ದೊಡ್ಡಬಳ್ಳಾಪುರ: ಗ್ರಾಮೀಣ ಹಾಗೂ ದೂರದೂರದ ಪ್ರದೇಶಗಳಿಗೆ ತುರ್ತು ಆರೋಗ್ಯ ಸೇವೆ ಒದಗಿಸಲು ಸಂಚಾರಿ ಇ-ಬೈಕ್ ಸಹಕಾರಿ ಎಂದು ಜಿಪಂಸಿಇಒ ಡಾ.ವಾಸಂತಿ ಅಮರ್ ಹೇಳಿದರು.

ಜಿಲ್ಲಾಡಳಿತ ಭವನದ ಆವರಣದಲ್ಲಿ ಜಿಲ್ಲಾಡಳಿತ, ಆರೋಗ್ಯ ಇಲಾಖೆಯಡಿ ಆಪ್ಟಮ್ ಇಂಡಿಯಾ ಸಂಸ್ಥೆ ಮತ್ತು ಯುನೈಟೆಡ್ ವೇ ಬೆಂಗಳೂರು ಸಿಎಸ್‌ಆರ್ ಅನುದಾನದಡಿ ಬೆಂಗಳೂರು ಗ್ರಾಮಾಂತರ ಜಿಲ್ಲಾ ವ್ಯಾಪ್ತಿಯ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ 45 ಇ-ಬೈಕ್‌ಗಳನ್ನುಹಸ್ತಾಂತರಿಸುವಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಸರ್ಕಾರ ಈಗಾಗಲೇ ರಾಜ್ಯಾದ್ಯಂತ ಆರೋಗ್ಯ ಸೇತು ಸಂಚಾರಿ ಆರೋಗ್ಯ ಘಟಕ ಯೋಜನೆಯನ್ನು ಜಾರಿಗೊಳಿಸಿದೆ. ಇದಕ್ಕೆ ಪೂರಕವಾಗಿ ಇಂದು ಆಪ್ಟಮ್ ಇಂಡಿಯಾ ಸಂಸ್ಥೆ ನಮ್ಮ ಜಿಲ್ಲೆಯ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಇ-ಬೈಕ್‌ಗಳನ್ನು ನೀಡುತ್ತಿರುವುದು ಪ್ರಶಂಸನೀಯ. ಸಂಚಾರಿ ಇ-ಬೈಕ್‌ಗಳು ತುರ್ತು ಆರೋಗ್ಯ ಸೇವೆಗಳನ್ನು ಜನರಿಗೆ ಒದಗಿಸಲಿದೆ. ಗ್ರಾಮೀಣ ಭಾಗದವರಿಗೆ ಸೂಕ್ತ ಸಾರಿಗೆ ವ್ಯವಸ್ಥೆಯಿಲ್ಲದೆ, ತುರ್ತು ಆರೋಗ್ಯ ಸೇವೆಗಳಲ್ಲಿ ವಿಳಂಬವಾಗುತ್ತದೆ. ಈ ರೀತಿಯ ಸಂದರ್ಭಗಳಲ್ಲಿ ಇ-ವಾಹನಗಳು ಆರೋಗ್ಯ ಸಿಬ್ಬಂದಿಗೆ ಸಹಾಯಕ



ಬೆಂ.ಗ್ರಾ ಜಿಲ್ಲೆಯ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಸಂಚಾರಿ ಇ-ಬೈಕ್ ಹಸ್ತಾಂತರ ಕಾರ್ಯಕ್ರಮಕ್ಕೆ ಜಿಪಂ ಸಿಇಒ ವಾಸಂತಿ ಅಮರ್ ಚಾಲನೆ ನೀಡಿದರು.

ವಾಗುತ್ತವೆ ಎಂದು ಹೇಳಿದರು.

ಗ್ರಾಮೀಣ ಪ್ರದೇಶಗಳಲ್ಲಿ ಆಸ್ಪತ್ರೆಗೆ ಹೋಗಲು ಸಾಧ್ಯವಾಗದ ರೋಗಿಗಳಿಗೆ ತ್ವರಿತ ಚಿಕಿತ್ಸೆ, ಔಷಧಿಗಳನ್ನು ತಲುಪಿಸಲು ಹಾಗೂ ಮನೆ, ಮನೆಗೂ ಆರೋಗ್ಯ ಸೇವೆ ಒದಗಿಸಲು ಈ ವಾಹನಗಳು ಮಹತ್ವದ ಪಾತ್ರ ವಹಿಸುತ್ತವೆ.

ಇ-ಬೈಕ್‌ಗಳು ಪರಿಸರ ಸ್ನೇಹಿಯಾಗಿದ್ದು, ವಾಯುಮಾಲಿನ್ಯ ಆಗದಂತೆ ತಡೆಗಟ್ಟುತ್ತವೆ. ವಾಹನಗಳ ನಿರ್ವಹಣೆ ಸೇರಿದಂತೆ ಸರಿಯಾಗಿ ಬಳಸಿಕೊಳ್ಳಬೇಕು. ಎಲ್ಲಿ ಅವಶ್ಯಕತೆ ಇದೆಯೋ ಅಲ್ಲಿ ಸರಿಯಾದ ಸಮಯಕ್ಕೆ ಆರೋಗ್ಯ ಸೇವೆ ಒದಗಿಸಿ ಎಂದು ಆರೋಗ್ಯ ಸಿಬ್ಬಂದಿಗೆ ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಸೈಯಿದಾ ಆಯಿಷಾ, ಜಿಲ್ಲಾ ಪಂಚಾಯತಿ ಉಪಕಾರ್ಯದರ್ಶಿ ಶಿವಕುಮಾರ್, ಜಿಲ್ಲಾ ಆರೋಗ್ಯಾಧಿಕಾರಿ ಡಾ.ಲಕ್ಕಾಕೃಷ್ಣಾ ರೆಡ್ಡಿ, ಆಪ್ಟಮ್ ಸಂಸ್ಥೆಯ ನಿರ್ದೇಶಕರಾದ ಉಮಾ ರತ್ನಮ್ ಕೃಷ್ಣ ಮತ್ತು ಯುನೈಟೆಡ್ ವೇ ಬೆಂಗಳೂರು ಸಂಸ್ಥೆಯ ಸಿಇಒ ರಾಜೇಶ್ ಕೃಷ್ಣನ್, ಆರೋಗ್ಯ ಇಲಾಖೆ ಅಧಿಕಾರಿ ಗಳು ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

ವಸತಿ ಶಾಲಾ ಶಿಕ್ಷಕರ ಹುದ್ದೆಗಳಿಗೆ ಅರ್ಜಿ

ರಾಮನಗರ: 2026-27ನೇ ಸಾಲಿನಲ್ಲಿ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಿಗೆ ಮತ್ತು ಮೌಲಾನಾ ಆಜಾದ್ ಮಾದರಿ ಶಾಲೆಗಳಲ್ಲಿ (ಆಂಗ್ಲ ಮಾಧ್ಯಮ), ಡಾ.ಎಪಿಜೆ ಅಬ್ದುಲ್ ಕಲಾಂ ವಸತಿ ಶಾಲೆಯಲ್ಲಿ ಕನ್ನಡ, ಇಂಗ್ಲಿಷ್, ಹಿಂದಿ, ಉರ್ದು, ಗಣಿತ, ವಿಜ್ಞಾನ ಮತ್ತು ಸಮಾಜ ವಿಜ್ಞಾನ, ದೈಹಿಕ ಶಿಕ್ಷಣ ಸೇರಿ ವಿವಿಧ ವಿಷಯಗಳ ಶಿಕ್ಷಕರ ಹುದ್ದೆಗೆ ಅತಿಥಿ ಶಿಕ್ಷಕರ ಗೌರವಧನದ ಆಧಾರದ ಮೇಲೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಹರು ಸಂಬಂಧಪಟ್ಟ ವಿಷಯದಲ್ಲಿ ಪದವಿ ಹಾಗೂ ಬಿಎಡ್/ಬಿಪಿಎಡ್ ಪದವಿ ಕಡ್ಡಾಯ. ಅತಿಥಿ ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಿರುವ ಅಥವಾ ನಿವೃತ್ತ ಶಿಕ್ಷಕರುಅರ್ಜಿಸಲ್ಲಿಸಬಹುದು. ಆಯ್ಕೆಯಾದ ಅತಿಥಿ ಶಿಕ್ಷಕರಿಗೆ ಗೌರವ ಸಂಭಾವನೆ ನೀಡಲಾಗುವುದು. ಆಸಕ್ತರು ಜಿಲ್ಲಾ ಕಚೇರಿ, ಸಂಬಂಧಪಟ್ಟ ಶಾಲೆ/ಕಾಲೇಜುಗಳಲ್ಲಿ ಅರ್ಜಿ ಪಡೆದು ಭರ್ತಿ ಮಾಡಿದ ಅರ್ಜಿಯನ್ನುಅಗತ್ಯ ದಾಖಲೆಗಳೊಂದಿಗೆ ಜಿಲ್ಲಾ ಕಚೇರಿ/ತಾಲೂಕು ಮಾಹಿತಿ ಕೇಂದ್ರಗಳು, ಸಂಬಂಧಪಟ್ಟ ಶಾಲೆಗಳು/ಕಾಲೇಜುಗಳ ಪ್ರಾಂಶುಪಾಲರು/ ಮುಖ್ಯ ಶಿಕ್ಷಕರಿಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿಗಳ ಕಚೇರಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಕೊಠಡಿ ಸಂಖ್ಯೆ: 308 ಕಂದಾಯ ಭವನಕ್ಕೆ ಖುದ್ದು ಅಥವಾ ದೂರವಾಣಿ: 080-27271104, 7829489428 ಅಥವಾ ಮಾಹಿತಿ ಕೇಂದ್ರದ 9880297132, 7795757850, 8050412066, 8197514161 ಇಲ್ಲಿಗೆ ಸಂಪರ್ಕಿಸಿ.

ಏಪಕ್ಷೀಯ ನಿರ್ಧಾರಗಳೇ ಟಿಎಂಸಿ ಸೋಲಿಗೆ ಕಾರಣ: ವಿ.ಆರ್.ಸುದರ್ಶನ್

ವಿಜಯಪುರ: ಪಶ್ಚಿಮ ಬಂಗಾಳದ ಸಿಎಂ ಮಮತಾ ಬ್ಯಾನರ್ಜಿ 15 ವರ್ಷಗಳ ನಂತರ ಏಕ ಪಕ್ಷೀಯ ನಿರ್ಧಾರಗಳಿಂದ ಟಿಎಂಸಿ ಸೋಲಿಗೆ ಕಾರಣ ಎಂದು ವಿಧಾನ ಪರಿಷತ್ ಮಾಜಿ ಸಭಾಪತಿ ಸುದರ್ಶನ್ ತಿಳಿಸಿದರು.



ಪಟ್ಟಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಮತಾ ಬ್ಯಾನರ್ಜಿ ಅವರ ಸ್ವಯಂ-ಕೇಂದ್ರಿತ ಆಡಳಿತ ಶೈಲಿ ಮತ್ತು ಪಕ್ಷದೊಳಗಿನ ಏಕಪಕ್ಷೀಯ ನಿರ್ಧಾರಗಳು ಕಾರ್ಯಕರ್ತರು ಮತ್ತು ಸಾರ್ವಜನಿಕರಲ್ಲಿ ಅಸಮಾಧಾನ ಮೂಡಿಸಿದ್ದವು. ಪಕ್ಷದ ನಾಯಕರ ಮೇಲಿನ ಭ್ರಷ್ಟಾಚಾರದ ಆರೋಪಗಳು ಮತ್ತು ನೇಮಕಾತಿ ಹಗರಣ ಗಳು ತೃಣಮೂಲ ಕಾಂಗ್ರೆಸ್ ವರ್ಚಸ್ಸಿಗೆ ದೊಡ್ಡ ಪೆಟ್ಟು ನೀಡಿದ್ದವು. 15 ವರ್ಷಗಳ ಸುದೀರ್ಘ ಆಡಳಿತದ ನಂತರ, ಜನರು ಬದಲಾವಣೆ ಬಯಸಿದ್ದರು. ಇದು ಕೂಡ ಸೋಲಿಗೆ ಮುಖ್ಯ ಕಾರಣವಾಯಿತು ಎಂದರು.

ಒಂದುಕಾಲದಲ್ಲಿಕಮ್ಯೂನಿಸ್ಟರ ಭದ್ರ ಕೋಟೆ ಎನಿಸಿದ್ದ ಪಶ್ಚಿಮ ಬಂಗಾಳದಲ್ಲಿ ತೃಣಮೂಲ ಕಾಂಗ್ರೆಸ್ ಅಧಿಕಾರಕ್ಕೆ ತಂದು, ಸತತ 15 ವರ್ಷ ಆಡಳಿತ ನಡೆಸಿದ್ದ ಸಿಎಂ ಮಮತಾ ಬ್ಯಾನರ್ಜಿ ಹೋರಾಟದೊಂದಿಗೆ ಬಲಿಷ್ಠ ಸಂಘಟನೆಗಳನ್ನು ಎದುರಿಸಿ, ಬಂಗಾಳದ ಗದ್ದುಗೆ ಏರಿ, 'ದೀದಿ' ಎಂದೇ ಜನಮನ ಗೆದ್ದಿದ್ದರು. ಮಹಿಳೆಯೊಬ್ಬಳು ಪಕ್ಷ ಕಟ್ಟಿ 3 ಬಾರಿ ಮುಖ್ಯಮಂತ್ರಿ ಆಗುವುದು ಅಷ್ಟು ಸುಲಭದ ಕೆಲಸವಲ್ಲ. ಆದರೆ, ಅವರ ಏಕ ಪಕ್ಷೀಯ ನಿರ್ಧಾರಗಳೆ ಇಂದು ಅವರ ಸೋಲಿಗೆ ಮುಳ್ಳಾಯಿತು ಎಂದು ಹೇಳಿದರು.

ಬಿಎಸ್‌ವೈ ಅಭಿಮಾನೋತ್ಸವದಲ್ಲಿ ಹೆಚ್ಚು ಕಾರ್ಯಕರ್ತರು ಪಾಲ್ಗೊಳ್ಳಿ

ಚಿತ್ರದುರ್ಗದಲ್ಲಿ ಬಿಎಸ್‌ವೈ ಅಭಿಮಾನೋತ್ಸವ ಕಾರ್ಯಕ್ರಮ



• **ಕನ್ನಡಪ್ರಭ ವಾರ್ತೆ** ದೇವನಹಳ್ಳಿ

ಮೇ 9ರಂದು ಚಿತ್ರದುರ್ಗದಲ್ಲಿ ನಡೆಯುವ ಬಿ.ಎಸ್.ಯಡಿಯೂರಪ್ಪನವರ ಅಭಿಮಾನೋತ್ಸವ ಕಾರ್ಯಕ್ರಮದಲ್ಲಿ ತಾಲೂಕಿನ 7 ಮಹಾಶಕ್ತಿ ಕೇಂದ್ರಗಳಿಗೆ 25 ಬಸ್ಸುಗಳ ವ್ಯವಸ್ಥೆ ಮಾಡಿದ್ದು ಹೆಚ್ಚಿನ ಕಾರ್ಯಕರ್ತರು ಭಾಗವಹಿಸುವಂತೆ ಬಿಜೆಪಿ ತಾಲೂಕು ಅಧ್ಯಕ್ಷ ಎಲ್.ಎನ್.ಅಂಬರೀಶ್‌ಗೌಡ ತಿಳಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಾಜಿ ಸಿಎಂ ಯಡಿಯೂರಪ್ಪ ರಾಜಕೀಯ ಪ್ರವೇಶಿಸಿ 50 ವರ್ಷ ತುಂಬಿರುವ ಹಿನ್ನೆಲೆಯಲ್ಲಿ ಅಭಿಮಾನೋತ್ಸವ ಆಯೋಜಿಸಲಾಗಿದೆ. ಅವರು ಮುಖ್ಯಮಂತ್ರಿಯಾಗಿದ್ದಾಗ ಕೊಟ್ಟ ಜನಪರ ಯೋಜನೆಗಳು ಶಾಶ್ವತವಾಗಿ ಜನಮನದಲ್ಲಿ ನೆಲೆಯೂರಿದೆ. ಹೆಣ್ಣುಮಕ್ಕಳಿಗೆ ಉಚಿತ ಸೈಕಲ್, ಭಾಗ್ಯಲಕ್ಷ್ಮಿ ಬಾಂಡ್, ರೈತರ ಸಾಲಾ ಮನ್ನಾ ಸೇರಿದಂತೆ ಅನೇಕ ಯೋಜನೆಗಳನ್ನು ಜಾರಿಗೆ ತಂದು ಉತ್ತಮ ಆಡಳಿತ ನೀಡಿದ್ದಾರೆ. ದಕ್ಷಿಣ ಭಾರತದಲ್ಲಿ ಬಿಜೆಪಿಗೆ ಗಟ್ಟಿನೆಲೆ ಕಟ್ಟಿಕೊಟ್ಟ ಕೀರ್ತಿ ಯಡಿಯೂರಪ್ಪನವರಿಗೆ ಸಲ್ಲುತ್ತದೆ. ಅವರು ಹಾಕಿಕೊಟ್ಟ ಭದ್ರ ಬುನಾದಿಯಿಂದ ರಾಜ್ಯದಲ್ಲಿ ಬಿಜೆಪಿ ಪಕ್ಷ ಗಟ್ಟಿಯಾಗಿ ನೆಲೆಯೂರಿದೆ ಎಂದರು.

ಬಿಜೆಪಿ ಜಿಲ್ಲಾಧ್ಯಕ್ಷ ರಾಮಕೃಷ್ಣಪ್ಪ ಮಾತನಾಡಿ, ಯಡಿಯೂರಪ್ಪ ಹೆಣ್ಣುಮಕ್ಕಳ ಸಬಲೀಕರಣಕ್ಕಾಗಿ ಅನೇಕ ಯೋಜನೆಗಳನ್ನು ಜಾರಿ ಮಾಡಿದ್ದಾರೆ. ರೈತಪರ ಹೋರಾಟಗಳಲ್ಲಿ ರೈತರಿಗೆ ಚೈತನ್ಯ ತುಂಬಿದ್ದಾರೆ. ಅಭಿಮಾನೋತ್ಸವಕ್ಕೆ ನಮ್ಮ ವಿಧಾನಸಭಾ ಕ್ಷೇತ್ರದಿಂದ ತಾಲೂಕು ಅಧ್ಯಕ್ಷ ಅಂಬರೀಶ್‌ಗೌಡರ ನೇತೃತ್ವದಲ್ಲಿ 25 ಬಸ್ಸುಗಳಲ್ಲಿ 1 ಸಾವಿರಕ್ಕೂ ಹೆಚ್ಚು ಕಾರ್ಯಕರ್ತರು ತೆರಳಲಿದ್ದಾರೆ ಎಂದರು.

ಸಭೆಯಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ನಾಗವೇಣಿ, ಮಾಜಿ ಶಾಸಕ ಜಿ.ಚಂದ್ರಣ್ಣ, ಬಯಪ ಮಾಜಿ ಅಧ್ಯಕ್ಷ ಅಶ್ವಥ್‌ನಾರಾಯಣ್, ಒಬಿಸಿ ಜಿಲ್ಲಾಧ್ಯಕ್ಷ ಬಿ.ಕೆ.ನಾರಾಯಣ ಸ್ವಾಮಿ ಎಸ್ಸಿ ಮೋರ್ಚ ಅಧ್ಯಕ್ಷ ರಾಜಪ್ಪ, ಮುಖಂಡರಾದ ದೇಸುನಾಗರಾಜ್, ಅನಿಲ್, ತಮ್ಮಯ್ಯ, ಪ್ರಭು, ರಾಜೇಶ್, ಮೋಹನ್‌ಗೌಡ, ವಿಜಯಕುಮಾರ್ ಇತರರಿದ್ದರು.

ಗ್ರಾಮಸ್ಥರ ಅಭಿನಂದನೆ | ತಹಸೀಲ್ದಾರ್ ಆದೇಶದಂತೆ ಗ್ರಾಮ ಠಾಣಾ ಜಾಗ ಒತ್ತುವರಿ ತೆರವುಗೊಳಿಸಿದ ಯುವಕರು

50 ಲಕ್ಷ ಮೌಲ್ಯದ ಸರ್ಕಾರಿ ಆಸ್ತಿ ಉಳಿಸಿದ ಕಳಲುಘಟ್ಟ ಯುವಪಡೆ

• **ಕನ್ನಡಪ್ರಭ ವಾರ್ತೆ** ದಾಬಸ್‌ಪೇಟೆ

ತ್ಯಾಮಗೊಂಡ್ಲು ಹೋಬಳಿಯ ಕಳಲುಘಟ್ಟದಲ್ಲಿ ಒತ್ತುವರಿಯಾಗಿದ್ದ ಸರ್ಕಾರಿ ಜಾಗವನ್ನು ಗ್ರಾಮದ ಯುವಕರು ಒಗ್ಗೂಡಿ ಒಂದೂವರೆ ವರ್ಷಗಳ ನಿರಂತರ ಹೋರಾಟ ನಡೆಸಿದ ಫಲವಾಗಿ ತಹಸೀಲ್ದಾರ್‌ಆದೇಶದ ಮೇರೆಗೆ ಸರ್ಕಾರಿ ಅಧಿಕಾರಿಗಳು ಹಾಗೂ ಯುವಕರು ಒತ್ತುವರಿ ತೆರವುಗೊಳಿಸಿದರು.

ಕಳಲುಘಟ್ಟ ಗ್ರಾಪಂ ಕಚೇರಿ ಮುಂದೆ ಇರುವ ಸರ್ಕಾರಿ ಸ್ವತ್ತನ್ನು ಪಕ್ಕದ ಜಮೀನಿನ ಮಾಲೀಕ ಯಾವುದೇ ದಾಖಲೆಗಳಿಲ್ಲದೆ ಸರ್ಕಾರಿ ಜಾಗವನ್ನು ತನ್ನದೇ ಎಂದು ಹೇಳಿಕೊಂಡು ಒತ್ತುವರಿ ಮಾಡಿ ಕಾಂಪೌಂಡ್ ನಿರ್ಮಿಸಿದ್ದ ಇದರಿಂದ ಸಾರ್ವಜನಿಕ ಬಳಕೆಗೆ ಮೀಸಲಾಗಿದ್ದ ಜಾಗ ಕಳೆದುಹೋಗುವ ಆತಂಕ ಗ್ರಾಮಸ್ಥರಲ್ಲಿ ಮೂಡಿತ್ತು. ಆರಂಭದಲ್ಲಿ ಗ್ರಾಮದ ಯುವಕರು ಪಂಚಾಯಿತಿ ಮಟ್ಟದಲ್ಲಿ ಸಮಸ್ಯೆ ಬಗೆಹರಿಸಲು ಪ್ರಯತ್ನಿಸಿದರೂ, ಫಲ ಸಿಕ್ಕಿರಲಿಲ್ಲ. ನಂತರ ತಾಲೂಕು



ತ್ಯಾಮಗೊಂಡ್ಲು ಹೋಬಳಿಯ ಕಳಲುಘಟ್ಟದಲ್ಲಿ ಸರ್ಕಾರಿ ಗ್ರಾಮ ಠಾಣಾ ಜಾಗ ಒತ್ತುವರಿಯನ್ನು ಗ್ರಾಮದ ಯುವಕರೇ ತೆರವುಗೊಳಿಸಿ ಸಾರ್ವಜನಿಕರ ಬಳಕೆಗೆ ಅನುವು ಮಾಡಿಕೊಟ್ಟರು.

ದಂಡಾಧಿಕಾರಿಗೆ ದೂರು ಸಲ್ಲಿಸಿ ಕಾನೂನಾತ್ಮಕ ಹೋರಾಟ ನಡೆಸಿದ ಫಲವಾಗಿ ಒತ್ತುವರಿ ತೆರವುಗೊಳಿಸಲಾಗಿದೆ.

ಹೋರಾಟಕ್ಕೆ ಸಂದ ಜಯ: ಗ್ರಾಮದ ಯುವ ಮುಖಂಡ ಕೃಷ್ಣಮೂರ್ತಿ ನೇತೃತ್ವದಲ್ಲಿ ಕಳೆದ ಒಂದೂವರೆ ವರ್ಷದಿಂದ ಗ್ರಾಮಕ್ಕೆ ಹೊಂದಿಕೊಂಡಿದ್ದ 10 ಗುಂಟೆ ಪ್ರದೇಶವನ್ನು ಗ್ರಾಮದ ಪ್ರಭಾವಿ ವ್ಯಕ್ತಿ ಒತ್ತುವರಿ ಮಾಡಿಕೊಂಡಿದ್ದರು. ಪ್ರಶ್ನಿಸಿದರೆ ದಾಖಲೆಗಳನ್ನು ನೀಡುವಲ್ಲಿ ಹಿಂದೇಟು ಹಾಕುತ್ತಿದ್ದರು. ಇದರ ವಿರುದ್ಧ ಗ್ರಾಮದ ಯುವಕರು ಒಗ್ಗಟ್ಟಿನಿಂದ ಸಾಕ್ಷಾಧಾರಗಳನ್ನು ಸಂಗ್ರಹಿಸಿ, ಸಂಬಂಧಿತ

> **ಕಳಲುಘಟ್ಟ ಕಾಲೋನಿಗೆ ಹೊಂದಿಕೊಂಡಿರುವ ಜಮೀನಿನ ಮಾಲೀಕರು ಸರ್ಕಾರಿ ಜಾಗ ಒತ್ತುವರಿ ಮಾಡಿಕೊಂಡು ಬಳಸುತ್ತಿದ್ದರು. ಈ ಕುರಿತು ಅರ್ಜಿ, ದೂರು ಸಲ್ಲಿಸಿದರೂ ಪ್ರಯೋಜನವಾಗಲಿಲ್ಲ. ಬಳಿಕ ಗ್ರಾಮದ ಯುವಕರೆಲ್ಲ ಸೇರಿ ದಾಖಲೆಗಳನ್ನು ಸಂಗ್ರಹಿಸಿ, ನೆಲಮಂಗಲ ತಹಸೀಲ್ದಾರ್‌ಗೆ ದೂರು ಸಲ್ಲಿಸಿ ಕಾನೂನಾತ್ಮಕ ಹೋರಾಟ ಮಾಡಿ ಸರ್ಕಾರಿ ಆಸ್ತಿ ಉಳಿಸಿದ್ದೇವೆ.**
>
> • **ಕೃಷ್ಣಮೂರ್ತಿ,** ಯುವ ಮುಖಂಡ, ಕಳಲುಘಟ್ಟ

ಅಧಿಕಾರಿಗಳಿಗೆ ಕೊಟ್ಟು, ಸಮಸ್ಯೆ ಬಗೆಹರಿಸಿದ ಕಾರಣ ತಹಸೀಲ್ದಾರ್‌ಕೋರ್ಟ್‌ನಲ್ಲಿ ದೂರು ದಾಖಲಿಸಿ ಒತ್ತುವರಿ ಜಾಗ ತೆರವುಗೊಳಿಸಿ ಸರ್ಕಾರಿ ಆಸ್ತಿ ಉಳಿಸಿದ್ದಾರೆ.

ನೆಲಮಂಗಲ ತಹಸೀಲ್ದಾರ್‌ಆದೇಶದಂತೆ ಒತ್ತುವರಿದಾರರಿಗೆ ತೆರವುಗೊಳಿಸಲು ಸೂಚಿಸಿದರು. ತೆರವುಗೊಳಿಸದ ಕಾರಣ ತ್ಯಾಮಗೊಂಡ್ಲು ರಾಜಸ್ವ ನಿರೀಕ್ಷಕ ಮಹೇಶ್ ಕುಮಾರ್, ಕಳಲುಘಟ್ಟ ಗ್ರಾಪಂ ಪಿಡಿಒ ವೆಂಕಟೇಶ್ ಸ್ಥಳದಲ್ಲೇ ನಿಂತು ಯುವಕರ ಸಹಕಾರದಿಂದ ಕಾಂಪೌಂಡ್ ಉರುಳಿಸಿ ಸಾರ್ವಜನಿಕರ ಬಳಕೆಗೆ ಅನುಕೂಲ ಮಾಡಿಕೊಟ್ಟರು.

ಹೋರಾಟದಲ್ಲಿ ಗ್ರಾಮದ ಯುವಕರಾದ ಕೃಷ್ಣಮೂರ್ತಿ, ರಂಜಿತ್, ಸಿದ್ದರಾಜು, ಚಿರಂತ್, ಅಜಯ್, ಶಶಿಕುಮಾರ್, ತೇಜಸ್, ದೇವರಾಜ್, ನಾಗರಾಜ್, ಅಕ್ಷಯ್, ರಮೇಶ್, ನಾಗೇಶ್, ಸಿದ್ದಗಂಗಮ್ಮ ಗಂಗರಾಜಮ್ಮ, ಕೆಂಪಮ್ಮ ಮತ್ತು ಭಾಗ್ಯಮ್ಮ ಇತರರಿದ್ದರು. ಇವರ ಒಗ್ಗಟ್ಟು ಮತ್ತು ದೃಢಸಂಕಲ್ಪವೇ ಈ ಹೋರಾಟದ ಯಶಸ್ಸಿಗೆ ಕಾರಣ ಎಂದು ಗ್ರಾಮಸ್ಥರು ಅಭಿನಂದಿಸಿದರು.

ಸುದ್ದಿ ಸಿಂಚನ

ಚನ್ನಪಟ್ಟಣ-ಬೆಂಗಳೂರು ಬಿಎಂಟಿಸಿ ಬಸ್ ಆರಂಭ

ಚನ್ನಪಟ್ಟಣ: ಬೆಂಗಳೂರಿನಿಂದ ರಾಮನಗರದವರೆಗೂ ಮಾತ್ರ ಇದ್ದ ಬಿಎಂಟಿಸಿ ಸೇವೆ ಶುಕ್ರವಾರದಿಂದ ಚನ್ನಪಟ್ಟಣಕ್ಕೂ ವಿಸ್ತರಿಸಿದ್ದು, ಚನ್ನಪಟ್ಟಣದ ಜನರಿಗೂ ಇನ್ನು ಮುಂದೆ ಬಿಎಂಟಿಸಿ ಸೇವೆ ಸಿಗಲಿದೆ. ಎರಡು ತಿಂಗಳ ಹಿಂದೆ ಬಿಎಂಟಿಸಿ ಸೇವೆಯನ್ನು ರಾಮನಗರ ಹಾಗೂ ಕನಕಪುರಕ್ಕೆ ವಿಸ್ತರಿಸಲಾಗಿತ್ತು. ಈ ವೇಳೆ ಚನ್ನಪಟ್ಟಣಕ್ಕೂ ಸೇವೆ ವಿಸ್ತರಿಸುವ ಸಚಿವರ ಭರವಸೆಯಂತೆ ಶುಕ್ರವಾರ ಬಿಎಂಟಿಸಿ ಸೇವೆಗೆ ಶಾಸಕ ಯೋಗೇಶ್ವರ್ ಹಾಗೂ ಸಾರಿಗೆ ಇಲಾಖೆ ಅಧಿಕಾರಿಗಳು ಚಾಲನೆ ನೀಡಲಿದ್ದಾರೆ. ಈಗಾಗಲೇ ರಾಮನಗರಕ್ಕೆ 6 ಹಾಗೂ ಕನಕಪುರಕ್ಕೆ 8 ಬಿಎಂಟಿಸಿ ವಾಯುವಜ್ರ ಎಸಿ ಬಸ್‌ಗಳನ್ನು ನಿಯೋಜಿಸಲಾಗಿದೆ. ಬೆಳಿಗ್ಗೆಯಿಂದ ಸಂಜೆವರೆಗೂ ಅರ್ಧ ಗಂಟೆಗೆ ಒಂದರಂತೆ 10 ಬಸ್‌ಗಳು ಸಾರ್ವಜನಿಕರ ಸೇವೆಗೆ ಚನ್ನಪಟ್ಟಣದಿಂದ ಕೆಂಪೇಗೌಡ ನಿಲ್ದಾಣದವರೆಗೆ ಪ್ರತಿನಿತ್ಯ ಸಂಚರಿಸುವ ಬಸ್ಸುಗಳು ರಾಮನಗರ, ಬಿಡದಿ, ಕೆಂಗೇರಿ ನಿಲ್ದಾಣ ಗಳಲ್ಲಿ ಮಾತ್ರ ನಿಲುಗಡೆಯಾಗಲಿವೆ. ಈ ಬಸ್ಸುಗಳಲ್ಲಿ ಮಹಿಳೆಯರಿಗೆ ಉಚಿತ ಪ್ರಯಾಣ ಇರುವುದಿಲ್ಲ.

ನಾಳೆ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಸನ್ಮಾನ

ರಾಮನಗರ: ನಗರದ ಗೌಸಿಯಾ ಎಂಜಿನಿಯರಿಂಗ್ ಕಾಲೇಜು ವತಿಯಿಂದ ಮೇ 9ರಂದು ಕಾಲೇಜಿನ ಸಭಾಂಗಣದಲ್ಲಿ ದ್ವಿತೀಯ ಪಿಯು ಪರೀಕ್ಷೆ ವಿಜ್ಞಾನ ವಿಭಾಗದಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಸನ್ಮಾನ ಆಯೋಜಿಸಲಾಗಿದೆ. ಮುಖ್ಯ ಅತಿಥಿಗಳಾಗಿ ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಂ.ಸ್ವಾಮಿ, ಜಿಲ್ಲಾ ಪ್ರಾಂಶುಪಾಲರ ಸಂಘದ ಅಧ್ಯಕ್ಷ ಜಿ.ಶಿವಣ್ಣ, ಗೌಸಿಯಾ ತಾಂತ್ರಿಕ ಮತ್ತು ಶೈಕ್ಷಣಿಕ ಟ್ರಸ್ಟ್ ಅಧ್ಯಕ್ಷ ನವಾಜ್ ಷರೀಫ್, ಕ್ಯಾಡರ್ಶಿ ಉಮರ್‌ಇಸ್ಮಾಯಿಲ್, ಜಿಸಿಇ ಪ್ರಾಂಶು ಪಾಲ ಡಾ.ಎನ್.ಎಸ್.ಕುಮಾರ್, ಜಿಪಿಯುಸಿ ಪ್ರಾಂಶುಪಾಲ ಪ್ರೊ.ನಜರುಲ್ಲಾ ಖಾನ್ ಪಾಲ್ಗೊಳ್ಳಲಿದ್ದಾರೆ.

ಕಸಾಪಗೆ ರಾಜ್ಯಾಧ್ಯಕ್ಷರು ಇಲ್ಲದಿರುವುದು ದುರಂತ

ಜಾನಪದ ವಿದ್ವಾಂಸ ಡಾ.ಚಕ್ಕರೆ ಶಿವಶಂಕರ್ ವಿಷಾದ | ಜಿಲ್ಲಾ ಕಸಾಪ ಹಮ್ಮಿಕೊಂಡಿದ್ದ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮ

• **ಕನ್ನಡಪ್ರಭ ವಾರ್ತೆ** ಚನ್ನಪಟ್ಟಣ

ಕನ್ನಡ ನಾಡು, ನುಡಿ ಹಾಗೂ ಸಾಹಿತ್ಯದ ಅಭಿವೃದ್ಧಿ ದೃಷ್ಟಿಯಿಂದ ಸ್ಥಾಪಿಸಲಾದ ಕನ್ನಡ ಸಾಹಿತ್ಯ ಪರಿಷತ್ತಿಗೆ ಸದ್ಯ ರಾಜ್ಯಾಧ್ಯಕ್ಷರಿಲ್ಲರುವುದು ದುರಂತ ಎಂದು ಜಾನಪದ ವಿದ್ವಾಂಸ ಡಾ.ಚಕ್ಕರೆ ಶಿವಶಂಕರ್ ವಿಷಾದ ವ್ಯಕ್ತಪಡಿಸಿದರು.

ಪಟ್ಟಣದ ಕೇಂಬ್ರಿಡ್ಜ್ ಪಿಯು ಕಾಲೇಜು ಆವರಣದಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಹಮ್ಮಿಕೊಂಡಿದ್ದ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ನಾಲ್ವಡಿ ಕೃಷ್ಣರಾಜ ಒಡೆಯರ್ ಸೇರಿದಂತೆ ಗಣ್ಯರ ಕಳಕಳಿಯ ಫಲ ಮತ್ತು ದೂರದೃಷ್ಟಿ ಚಿಂತನೆಯಿಂದ ಕನ್ನಡ ನಾಡಿನ ಜನರನ್ನು ಒಟ್ಟುಗೂಡಿಸಿ, ನಾಡಿನ ಸಮಗ್ರ ಅಭಿವೃದ್ಧಿಗಾಗಿ ಕಸಾಪ ಸ್ಥಾಪಿಸಲಾಯಿತು. ಅದಕ್ಕೀಗ ರಾಜ್ಯಾಧ್ಯಕ್ಷರಿಲ್ಲದಿರುವುದು ಬೇಸರದ ಸಂಗತಿ ಎಂದರು.

ನಮ್ಮನ್ನಾಳುವ ಆಡಳಿತ ಧರ್ಮ ರಾಜಕಾರಣ ಮಾಡುತ್ತಿದ್ದು, ಭಾರತ ಎತ್ತ ಸಾಗುತ್ತಿದೆ ಎಂಬುದು ಕಳವಳಕಾರಿಯಾಗಿದೆ. ಮಕ್ಕಳ ಮೇಲೆ ಭಾಷೆ ಹೇರುವ ಕೆಲಸವಾಗುತ್ತಿದೆ. ಕನ್ನಡಿಗರಿಗೆ ಕನ್ನಡ ಮಾತೃ ಭಾಷೆ ಮಕ್ಕಳಿಗೆ ನಿರತರವಾಗಿ ವೃತ್ತಿ, ಉದ್ಯೋಗ, ಅನ್ನ ನೀಡುವ ಕೆಲಸವಾಗಬೇಕು ಎಂದರು.



ರಾಮನಗರದ ಕೇಂಬ್ರಿಡ್ಜ್ ಕಾಲೇಜಿನಲ್ಲಿ ಜಿಲ್ಲಾ ಕಸಾಪ ಹಮ್ಮಿಕೊಂಡಿದ್ದ ಸಂಸ್ಥಾಪನಾ ದಿನಾಚರಣೆಯನ್ನು ಜಾನಪದ ವಿದ್ವಾಂಸ ಡಾ.ಚಕ್ಕರೆ ಶಿವಶಂಕರ್‌ಉದ್ಘಾಟಿಸಿದರು. ಜಿಲ್ಲಾಧ್ಯಕ್ಷ ಬಿ.ಟಿ.ನಾಗೇಶ್ ಇತರರಿದ್ದರು.

ಸಾಹಿತಿ ಮತ್ತೀಕೆರೆ ಚಲುವರಾಜು ಮಾತನಾಡಿ, ಕನ್ನಡಿಗರ ಆಶಯದಂತೆ ಕಸಾಪ ಸಂಸ್ಥೆ ಹುಟ್ಟುಹಾಕಿ ಹರಿದು ಹಂಚಿ ಹೋಗಿದ್ದ ಕನ್ನಡ ನಾಡನ್ನು ಒಟ್ಟುಗೂಡಿಸುವ ಕೆಲಸವನ್ನು ನಾಲ್ವಡಿ ಕೃಷ್ಣರಾಜ ಒಡೆಯರ್ ಮಾಡಿ, ಹಲವು ಸಾಹಿತ್ಯದ ಕೊಡುಗೆಗಳನ್ನು ನೀಡುವ ಮೂಲಕ ಹೆಮ್ಮರವಾಗಿ ಬೆಳೆದಿದೆ. ಹಿರಿಯರ ಆಶಯದಂತೆ ನೆಲಮೂಲ ಸಂಸ್ಕೃತಿಯಾದ ಕಲೆ, ಸಾಹಿತ್ಯ, ಜಾನಪದದಿಂದ ಕನ್ನಡಿಗರಲ್ಲಿ ಕನ್ನಡತನವನ್ನು ಮೈಗೂಡಿಸುತ್ತಿದೆ ಎಂದರು.

ಕೇಂಬ್ರಿಡ್ಜ್ ಪಿಯು ಕಾಲೇಜಿನ ಪ್ರಾಂಶುಪಾಲ ಕೆ.ಎನ್.ಮಧುಸೂದನ್ ಮಾತನಾಡಿ, ಕನ್ನಡ ಭಾಷೆಯ ಪ್ರಾತಿನಿಧಿಕ ಸಂಸ್ಥೆಯಾದ ಕಸಾಪ ಕನ್ನಡ ಭಾಷೆಯ ಬೆಳವಣಿಗೆಗೆ ಬಹಳ ಅರ್ಥಪೂರ್ಣವಾಗಿ ಕೆಲಸ ಮಾಡಿದೆ. ನಿರಂತರವಾಗಿ ಸಾಹಿತ್ಯದ ಮೂಲಕ ಎಲ್ಲರನ್ನು ಏಕದೃಷ್ಟಿಯಿಂದ ಒಟ್ಟುಗೂಡಿಸುವ ಕನ್ನಡಿಗರ ಜನಸಾಮಾನ್ಯರತ್ತ ಹೆಮ್ಮೆಯ ಸಂಸ್ಥೆಯಾಗಿದೆ ಎಂದು ತಿಳಿಸಿದರು.

ಕಸಾಪ ಜಿಲ್ಲಾಧ್ಯಕ್ಷ ಬಿ.ಟಿ.ನಾಗೇಶ್ ಮಾತನಾಡಿ, ನಾಡು, ನುಡಿ, ಸಾಹಿತ್ಯ ಬೆಳವಣಿಗೆ ಕಸಾಪ ಮೂಲ ತತ್ವವಾಗಿದೆ. ಪ್ರತಿಯೊಬ್ಬ ಕನ್ನಡಿಗರು ಪರಭಾಷಾ ವ್ಯಾಮೋಹ ಬಿಟ್ಟು ಮಾತೃಭಾಷೆಗೆ ಒತ್ತು ನೀಡಬೇಕು. ಕನ್ನಡ ನಾಡು ನುಡಿಗಾಗಿ ಕನ್ನಡಿಗರಲ್ಲಿ ವಿದ್ಯಾರ್ಥಿಗಳಲ್ಲಿ ಭಾಷೆ ಬಗ್ಗೆ ಜೀವ ತುಂಬುವ ಕೆಲಸ ಮಾಡಬೇಕಿದೆ ಎಂದರು.

ನಿವೃತ್ತ ಪ್ರಾಧ್ಯಾಪಕ ಚನ್ನವೀರೇಗೌಡ, ಚೌಡೇಗೌಡ, ರಂಗಸ್ವಾಮಿ, ನಾರಾಯಣಸ್ವಾಮಿ, ವೆಂಕಟೇಗೌಡ, ಡಾ.ಲೋಕಾನಂದ್, ಕದಂಬಸೇನೆ ಜಿಲ್ಲಾಧ್ಯಕ್ಷ ಶಿವಕುಮಾರ್, ನಿವೃತ್ತ ಮುಖ್ಯ ಶಿಕ್ಷಕ ವಸಂತ ಕುಮಾರ್, ಸಾಹಿತಿ ಕೂರಣಗೆರೆ ಕೃಷ್ಣಪ್ಪ, ಓಂಕಾರ ಪ್ರಿಯ ನಾಗರಾಜು, ನಿವೃತ್ತ ಸಿಡಿಪಿಒ ಪುಟ್ಟಸ್ವಾಮಿ, ಉಪನ್ಯಾಸಕ ರಂಜನ್ ಕುಮಾರ್‌ಇತರರಿದ್ದರು.

ನವೋದಯ ಶಾಲೆ ಸಂಪರ್ಕ ರಸ್ತೆಗೆ ಭೂಮಿಪೂಜೆ

ಕನಕಪುರ: ತಾಲೂಕಿನ ಕಸಬಾ ಹೋಬಳಿ ಬರಡನಹಳ್ಳಿ ಬಳಿ ನಿರ್ಮಾಣಗೊಂಡಿರುವ ನವೋದಯ ಶಾಲೆಗೆ ಸಂಪರ್ಕ ಮಾಡಲು 6 ಕಿಮೀ ದೂರದ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಬಮೂಲ್ ಅಧ್ಯಕ್ಷ ಡಿ.ಕೆ.ಸುರೇಶ್ ಶಂಕುಸ್ಥಾಪನೆ ನೆರವೇರಿಸಿದರು.

ತಾಲೂಕಿನ ಉಪ್ಪುಕೆರೆ ದೊಡ್ಡಿಯಿಂದ ನವೋದಯ ಶಾಲೆ ಸಂಪರ್ಕ ರಸ್ತೆ ಕಾಮಗಾರಿಗೆ ಗುದ್ದಲಿ ಪೂಜೆ ನೆರವೇರಿಸಿ ಮಾತನಾಡಿದ ಅವರು, ಸರ್ಕಾರದ ವಿವಿಧ ಅನುದಾನಗಳಿಂದ 6 ಕೋಟಿ ರು. ವೆಚ್ಚದಲ್ಲಿ ರಸ್ತೆ ನಿರ್ಮಾಣವಾಗಲಿದೆ. ಉಪ್ಪುಕೆರೆ ದೊಡ್ಡಿಯಿಂದ ನವೋದಯ ಶಾಲೆ, ಚಾಕನಹಳ್ಳಿ ಮುಖ್ಯ ರಸ್ತೆಯ ಆಸ್ಪತ್ರೆ ಬಳಿಯಿಂದ ನವೋದಯ ಶಾಲೆ, ದೇಗುಲ ಮಠದಿಂದ ಬೃಹತ್ ಸೇತುವೆ ದಾಟಿ ಬರಡನಹಳ್ಳಿಯವರೆಗೆ ರಸ್ತೆ ನಿರ್ಮಾಣವಾಗಲಿದೆ. ನವೋದಯ ಶಾಲೆಗೆ ತಲುಪಲು ಈ ಎರಡು ಮೂರು ಭಾಗಗಳಿಂದ ನೇರ ಸಂಪರ್ಕಕ್ಕಾಗಿ ಸುಸಜ್ಜಿತ ರಸ್ತೆ ನಿರ್ಮಾಣವಾಗಲಿದೆ. ಸ್ಥಳೀಯ ಸಂಪರ್ಕ ಮತ್ತು ಸಾರಿಗೆ ವ್ಯವಸೆಯನ್ನು ಸುಧಾರಿಸುವ ಗುರಿಯನ್ನು ಹೊಂದಲಾಗಿದೆ ಎಂದರು.



ವಿಧಾನ ಪರಿಷತ್ ಸದಸ್ಯ ಎಸ್.ರವಿ, ನಾರಾಯಣಗೌಡ, ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ದಿಲೀಪ್, ಗ್ರಾಪಂ ಮಾಜಿ ಅಧ್ಯಕ್ಷ ವೆಂಕಟೇಗೌಡ, ಕಸಬಾ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮುತ್ತುರಾಜು, ಶೇಖರ್, ಸುಮಂತ್, ಬರಡನಹಳ್ಳಿ, ಜವನಮ್ಮನದೊಡ್ಡಿ, ಕೆರಳಾಳುಸಂದ್ರದ ಮುಖಂಡರು ಭಾಗವಹಿಸಿದ್ದರು.

24 ಗಂಟೆಯೊಳಗೆ ಇಬ್ಬರು ಸರಗಳ್ಳರ ಬಂಧನ

ರಾಮನಗರ: ಸರಗಳ್ಳತನ ಮಾಡಿದ್ದ ದುಷ್ಕರ್ಮಿಗಳನ್ನು ಹಾರೋಹಳ್ಳಿ ಠಾಣೆ ಪೊಲೀಸರು ಕೃತ್ಯ ನಡೆದ 24 ಗಂಟೆಯೊಳಗೆ ಬಂಧಿಸಿದ್ದಾರೆ. ಬೆಂಗಳೂರು ನಗರ ಜಿಲ್ಲೆಯ ಆನೇಕಲ್ ತಾಲೂಕು ಕುವೆಂಪುನಗರ ವಾಸಿ ಲೋಕೇಶ್ ಮತ್ತು ಸರ್ಜಾಪುರ ಹೋಬಳಿ ಮಟ್ಟನಹಳ್ಳಿ ವಾಸಿ ವಿ.ರಮೇಶ್ ಬಂಧಿತರು.

ಮೇ 4 ರಂದು ಆನೇಕಲ್ - ಹಾರೋಹಳ್ಳಿ ಮುಖ್ಯ ರಸ್ತೆಯಲ್ಲಿನ ನರಿಪುರ ಗೇಟ್ ಎಸ್‌ಎಲ್‌ವಿ ಕಾಂಡಿಮೆಂಟ್ಸ್ ಅಂಗಡಿ ಬಳಿ ಲಕ್ಷ್ಮಮ್ಮ ನೀರು ತೆಗೆದುಕೊಳ್ಳಲು ಬಂದಾಗ ಪಲ್ಸರ್ ಬೈಕಲ್ಲಿ ಬಂದ ಇಬ್ಬರು ಆರೋಪಿಗಳು ಲಕ್ಷ್ಮಮ್ಮ ಅವರನ್ನು ಅಡ್ಡಗಟ್ಟಿ 4 ಲಕ್ಷ ರುಪಾಯಿ ಮೌಲ್ಯದ 26 ಗ್ರಾಂ ತೂಕದ ಚಿನ್ನದ ಮಾಂಗಲ್ಯ ಸರವನ್ನು ಕಸಿದು ಪರಾರಿ ಯಾಗಿದ್ದರು.

ಈ ವಿಚಾರ ತಿಳಿದು ತಕ್ಷಣ ಕಾರ್ಯಪ್ರವೃತ್ತರಾದ ಹಾರೋಹಳ್ಳಿ ಠಾಣೆ ಪೊಲೀಸರು ಪ್ರಕರಣ ದಾಖಲಾದ 24 ಗಂಟೆಯೊಳಗೆ ಆರೋಪಿಗಳಾದ ಲೋಕೇಶ್ ಮತ್ತು ರಮೇಶ್‌ನನ್ನು ಬಂಧಿಸಿ ಚಿನ್ನದ ಸರ ಮತ್ತು ಕೃತ್ಯಕ್ಕೆ ಬಳಸಿದ ಆನೇಕಲ್ ಟೌನಲ್ಲಿ ಕಳ್ಳತನ ಮಾಡಿದ್ದ ಪಲ್ಸರ್ ಬೈಕ್ ವಶಪಡಿಸಿಕೊಂಡಿದ್ದಾರೆ. ಎಸ್ಪಿ ಶ್ರೀನಿವಾಸಗೌಡ ಮತ್ತು ಎಎಸ್ಪಿ ರಾಮಚಂದ್ರಯ್ಯ, ರಾಜೇಂದ್ರ ಮಾರ್ಗದರ್ಶನದಲ್ಲಿ ಡಿವೈಎಸ್ಪಿ ಬಿ.ಎನ್.ಶ್ರೀನಿವಾಸ್ ಹಾರೋಹಳ್ಳಿ ಪೊಲೀಸ್ ಠಾಣೆ ನಿರೀಕ್ಷಕ ಕೆ.ಮಲ್ಲೇಶ್ ನೇತೃತ್ವದ ತಂಡ ಕಾರ್ಯಾಚರಣೆ ನಡೆಸಿ ಆರೋಪಿಗಳನ್ನು ಬಂಧಿಸಿದೆ.

ಕಾರ್ಯಾಚರಣೆಯಲ್ಲಿ ಪಿಎಸ್ಐ ಪ್ರಜ್ವಲ್, ಎಎಸ್ಐ ಅಯೂಬ್ ಪಾಷ, ಸಿಬ್ಬಂದಿಗಳಾದ ಅನಂತ್ ಕುಮಾರ್, ಬೋರೇಗೌಡ, ಶಂಕರಲಿಂಗ, ಕುಂಬರ್, ಶರಣಬಸವ, ಕೃಷ್ಣಮೂರ್ತಿ, ವಿರೂಪಾಕ್ಷಪ್ಪ, ಜೀಪ್ ಚಾಲಕ ಫೈರೋಜ್ ಪಾಷ ಮತ್ತಿತರರು ಪಾಲ್ಗೊಂಡಿದ್ದರು.

ಸೋದರ ಸಂಬಂಧಿಯ ಪ್ರೀತಿಸಿ ಮದುವೆಯಾದ ಯುವತಿ!

ವರಸೆಯಲ್ಲಿ ಅಕ್ಕ-ತಮ್ಮ ಮದುವೆ | ರಕ್ಷಣೆ ಕೋರಿ ಪೊಲೀಸರಿಗೆ ಮನವಿ | ಶಶಿಕಲಾಗೆ ಬೇರೆ ಹುಡುಗನೊಂದಿಗೆ ಮದುವೆ ನಿಶ್ಚಯ

• **ಕನ್ನಡಪ್ರಭ ವಾರ್ತೆ,** ಚಿಕ್ಕಬಳ್ಳಾಪುರ

ಪ್ರೀತಿಗೆ ಕಣ್ಣಿಲ್ಲ ಅದು ಕುರುಡು ಎಂಬ ಮಾತಿಗೆ ಸಾಕ್ಷಿಯೆಂಬಂತೆ ವರಸೆಯಲ್ಲಿ ಅಕ್ಕ-ತಮ್ಮನೇ ಪ್ರೀತಿಸಿ ಮದುವೆಯಾಗಿ ಪೋಷಕರಿಗೆ ಶಾಕ್ ನೀಡಿರುವ ಘಟನೆ ನಗರದಲ್ಲಿ ನಡೆದಿದೆ.

ಬೆಂಗಳೂರು ಗ್ರಾಮಾಂತರ ಜಿಲ್ಲೆ ದೇವನಹಳ್ಳಿ ತಾಲೂಕಿನ ಸಾವಕನಹಳ್ಳಿ ಶಶಿಕಲಾ (29) ಮತ್ತು ಹೊಸಕೋಟೆ ತಾಲೂಕಿನ ಹಳೆಊರಿನ ಪ್ರವೀಣ್ (24)ನನ್ನು ಮದುವೆಯಾಗಿದ್ದಾರೆ. ಅಷ್ಟೇ ಅಲ್ಲದೆ ತಮಗೆ ರಕ್ಷಣೆ ನೀಡುವಂತೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕಚೇರಿ ಮತ್ತು ಮಹಿಳಾ ಪೊಲೀಸ್ ಠಾಣೆಗೆ ಮನವಿ ಸಲ್ಲಿಸಿದ್ದಾರೆ.



ಏನಿದು ಘಟನೆ: ಶಶಿಕಲಾಳ ತಾಯಿಯ ತಂಗಿಯ ಮಗನೇ ಪ್ರವೀಣ್. ಅಂದರೆ ವರಸೆಯಲ್ಲಿ ಇವರಿಬ್ಬರು ಅಕ್ಕ-ತಮ್ಮ. ಇವರ ಪ್ರೀತಿಯ ವಿಷಯ ತಿಳಿದ ಪೋಷಕರು, ಈ ಸಂಬಂಧ ಸಮಾಜದಲ್ಲಿ ಒಪ್ಪಿತವಲ್ಲ ಎಂದು ವಿರೋಧಿಸಿದ್ದರು. ಅಲ್ಲದೆ, ಶಶಿಕಲಾಗೆ ಬೇರೊಬ್ಬ ಹುಡುಗನೊಂದಿಗೆ ನಿಶ್ಚಿತಾರ್ಥ ನಡೆಸಿ ಇದೇ ಮೇ 29ಕ್ಕೆ ಮದುವೆ ದಿನವನ್ನೂ ನಿಗದಿಪಡಿಸಿದ್ದರು. ಆದರೆ ಮದುವೆಗೆ ಕೆಲವೇ ದಿನ ಇರುವಾಗ ಶಶಿಕಲಾ ಮನೆಯಿಂದ ಹೊರಬಂದು ಪ್ರವೀಣ್‌ನೊಂದಿಗೆ ಚಿಕ್ಕಬಳ್ಳಾಪುರ ತಾಲೂಕಿನ ಅಂಗಟ್ಟ ಗ್ರಾಮದ ದೇವಾಲಯದಲ್ಲಿ ಮದುವೆಯಾಗಿದ್ದಾಳೆ.

ವಿಷಯ ತಿಳಿದ ಶಶಿಕಲಾ ಪೋಷಕರು ಬೆಂಗಳೂರು ಗ್ರಾಮಾಂತರ ಜಿಲ್ಲೆ ದೇವನಹಳ್ಳಿ ತಾಲೂಕಿನ ಚಪ್ಪರದಕಲ್ಲು ಪೊಲೀಸ್ ಠಾಣೆಯಲ್ಲಿ ನಾಪತ್ತೆ ದೂರು ದಾಖಲಿಸಿದ್ದಾರೆ. ಮದುವೆಯಾದ ಈ ಜೋಡಿ ಎಸ್ಪಿ ಕಚೇರಿ ಮತ್ತು ಮಹಿಳಾ ಠಾಣೆಗೆ ಧಾವಿಸಿ ರಕ್ಷಣೆ ನೀಡುವಂತೆ ಮನವಿ ಮಾಡಿದೆ.

ನಮ್ಮ ಪಾಡಿಗೆ ನಮ್ಮನ್ನ ಬಿಡಿ

'ನಾವು ಪರಸ್ಪರ ಇಷ್ಟಪಟ್ಟು ಮದುವೆಯಾಗಿದ್ದೇವೆ, ನಮ್ಮನ್ನು ನಮ್ಮ ಪಾಡಿಗೆ ಬದುಕಲು ಬಿಡಿ' ಎಂದು ಶಶಿಕಲಾ ಪೊಲೀಸರ ಮುಂದೆ ಹೇಳಿಕೆ ನೀಡಿದ್ದಾಳೆ. ಇತ್ತ ಪೋಷಕರು 'ವರಸೆಯಲ್ಲಿ ತಮ್ಮನಾಗುವವನನ್ನೇ ಮದುವೆಯಾಗಿ ಇಡೀ ಕುಟುಂಬಕ್ಕೆ ಅವಮಾನ ತಂದಿದ್ದೀಯಾ' ಎಂದು ಹತಾಶೆ ವ್ಯಕ್ತಪಡಿಸಿದ್ದಾರೆ. ಪ್ರಸ್ತುತ ಈ ವಿಚಿತ್ರ ಮದುವೆ ಪ್ರಕರಣ ಸ್ಥಳೀಯವಾಗಿ ಭಾರೀ ಚರ್ಚೆಗೆ ಗ್ರಾಸವಾಗಿದೆ.